ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 243 ₹ ಬೆಲೆ: 4 Sunday, 19, November,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಭಾರತ ಕ್ರಿಕೆಟ್ ತಂಡಕ್ಕೆ ಶುಭ ಹಾರೈಸಿದ ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಇಂದು ವಿಶ್ವಕಪ್ ಹಣಾಹಣಿ ನಡೆಯಲಿದೆ. ಅಹ್ಮದಾಬಾದ್ನ ಮೊಟೆರಾ ಸ್ಟೇಡಿಯಂನಲ್ಲಿ ಭಾನುವಾರ ಜರುಗಲಿರುವ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಭಾರತ ಜಯ ಗಳಿಸುವ ಮೂಲಕ ಮತ್ತೊಮ್ಮೆ ಟೀಂ ಇಂಡಿಯಾ ವಿಶ್ವಕಪ್ ಗೆಲ್ಲಲಿ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಶುಭ ಹಾರೈಸಿದ್ದಾರೆ.

ಈ ಭಾರಿ ನಡೆಯುವ ವಿಶ್ವಕಪ್ 2023 ಫೈನಲ್ ಕುರಿತು ಮಾತನಾಡಿದ ಅವರು, ಭಾರತ ತಂಡವು ವಿಶ್ವ ಕಪ್ ಕ್ರಿಕೆಟ್ನ ಸೆಮಿ ಫೈನಲ್ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ ತಂಡವನ್ನು ಸೋಲಿಸಿ ಫೈನಲ್ ತಲುಪಿದೆ.

ಇದಕ್ಕಾಗಿ ತಂಡದ ಎಲ್ಲ ಸದಸ್ಯರಿಗೆ ಅಬಿನಂದನೆ. ಮುಖ್ಯವಾಗಿ ಭಾರತ ತಂಡವು ವಿಶ್ವಕಪ್ ಗೆಲ್ಲಲಿ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಶುಭ ಹಾರೈಸಿದ್ದಾರೆ.

ಹೊಟ್ಟೆಉರಿ, ಹೊಟ್ಟೆಕಿಚ್ಚು, ಅಸೂಯೆ, ದ್ವೇಷ, ಹತಾಶೆಯಿಂದ ಕುಮಾರಸ್ವಾಮಿ ಆರೋಪ ಮಾಡುತ್ತಿದ್ದಾರೆ: ಸಿಎಂ ಸಿದ್ದರಾಮಯ್ಯ

ಮೈಸೂರು: ಕಳೆದ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಗೆ ರಾಜ್ಯದ ಜನತೆ ಪಾಠ ಕಲಿಸಿದ್ದಾರೆ. ಈಗ ಆರು ತಿಂಗಳಾಗಿದೆ, ಜನ ವಿರೋಧ ಪಕ್ಷದಲ್ಲಿ ಕುಳಿತುಕೊಳ್ಳಿ ಎಂದು ಹೇಳಿದ್ದಾರೆ. ತಾವು ಅಧಿಕಾರಕ್ಕೆ ಬಂದೇ ಬಿಡುತ್ತೇವೆ ಎಂದು ಭಾವಿಸಿದ್ದರು. ಬಿಜೆಪಿ-ಜೆಡಿಎಸ್ ನವರು ಸಮ್ಮಿಶ್ರ ಸರ್ಕಾರ ಮಾಡುತ್ತೇವೆ ಎಂದು ಅಂದುಕೊಂಡಿದ್ದರು. ಜನತೆ ನಮಗೆ ನಮಗೆ 136 ಸ್ಥಾನ ಕೊಟ್ಟಿದ್ದು ಕಂಡ ಹತಾಶರಾಗಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ, ತಮಗೆ ತೋಚಿದಂತೆ ವರ್ತಿಸುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಟೀಕಿಸಿದ್ದಾರೆ.

ಮೈಸೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕೌರವ ಸಂಸ್ಕೃತಿಯ ರಾಜಕಾರಣವನ್ನು ಸಿದ್ದರಾಮಯ್ಯನವರು ನನ್ನ ಜೊತೆ ಮಾಡುವುದು ಬೇಡ ಎಂಬ ಬಗ್ಗೆ ಪ್ರತಿಕ್ರಿಯಿಸಿದರು.

ಕುಮಾರಸ್ವಾಮಿಯವರು ಮಾಡಿರುವ ಆರೋಪಗಳನ್ನು ಎಂದಾದರೂ ಸಾಬೀತು ಮಾಡಿದ್ದನ್ನು ನೀವು ನೋಡಿದ್ದೀರಾ?ಅವರು ಹೊಟ್ಟೆಉರಿ, ಹೊಟ್ಟೆಕಿಚ್ಚು, ಅಸೂಯೆ, ದ್ವೇಷದಿಂದ ಹತಾಶರಾಗಿ ಏನೇನೋ ಮಾತನಾಡುತ್ತಾರೆ. 2018ರ ಚುನಾವಣೆಯಲ್ಲಿ 38 ಸ್ಥಾನಗಳನ್ನು ಗೆದ್ದಿದ್ದ ಜೆಡಿಎಸ್

ಈ ಬಾರಿ ಪಂಚರತ್ನ ಕಾರ್ಯಕ್ರಮ ನಡೆಸಿ ಗೆದ್ದಿದ್ದು ಕೇವಲ 19 ಶಾಸಕ ಸ್ಥಾನಗಳನ್ನು. ಇದೇ ಆರೋಪ ಮಾಡಿಕೊಂಡು ಬರುವ ಕೆಲಸವನ್ನು ಬಿಟ್ಟರೆ ಬೇರೇನೂ ಮಾಡಿಲ್ಲ ಎಂದರು.

ಯತೀಂದ್ರ ಸಿದ್ದರಾಮಯ್ಯ ಅವರನ್ನು ಟಾರ್ಗೆಟ್ ಮಾಡುತ್ತಿದ್ದಾರೆಯೇ ಎಂದು ಕೇಳಿದಾಗ, ಯಾರನ್ನಾದರೂ ಟಾರ್ಗೆಟ್ ಮಾಡಲಿ, ಜನತೆಗೆ ನೀಡಿರುವ ಆಶ್ವಾಸನೆ, ಭರವಸೆಯಂತೆ ಜನತೆಗೋಸ್ಕರ ಸರ್ಕಾರ ನಡೆಸಿಕೊಂಡು ಹೋಗುತ್ತೇವೆ ಎಂದರು.

ಟ್ವೀಟ್ ಮಾಡಿರುವ ಸಿದ್ದರಾಮಯ್ಯ: ಜೀವಮಾನದಲ್ಲಿಯೇ ಮತ್ತೆ ಅಧಿಕಾರ ಕೈಗೆ ಬಾರದು ಎಂಬ ರಾಜಕೀಯ ವಾಸ್ತವ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ನಿದ್ದೆಗೆಡಿಸಿ ಮಾನಸಿಕ ಸ್ವಾಸ್ತ್ಯವನ್ನು ಕಲಕಿದ ಹಾಗೆ ಕಾಣುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಟ್ವಿಟ್ಟರ್ ಮೂಲಕ ಕೂಡ ಲೇವಡಿ ಮಾಡಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಸುಳ್ಳುಕೋರನೆಂಬ ಅಪಖ್ಯಾತಿಯನ್ನು ಸ್ವಯಂ ತಾನೇ ಸಾಬೀತುಪಡಿಸುವ ಪೈಪೋಟಿಗೆ ಬಿದ್ದಿರುವ ಈ ಮಾಜಿ ಮುಖ್ಯಮಂತ್ರಿ ಇಂದು ಬೆಳ್ಳಂಬೆಳಗೆ ಎದ್ದು ಮತ್ತೊಂದಷ್ಟು ಸುಳ್ಳುಗಳನ್ನು ಉದುರಿಸಿದ್ದು ನೋಡಿದರೆ ರಾತ್ರಿಯಿಡೀ ನಿದ್ದೆಯಿಲ್ಲದೆ ಹೊರಳಾಡಿದ್ದು ಸ್ಪಷ್ಟವಾಗಿದೆ. ಯಾರಾದರೂ ಹಿತೈಷಿಗಳು ಇವರಿಗೆ ಸರಿಯಾದ ಚಿಕಿತ್ಸೆಗೆ ವ್ಯವಸ್ಥೆ ಮಾಡಬಾರದೇ ವ್ಯಂಗ್ಯವಾಡಿದ್ದಾರೆ.

ಮಾಜಿ ಶಾಸಕ ಡಾ.ಯತೀಂದ್ರ ಅವರ ಜೊತೆಗಿನ ನನ್ನ ಸಂಭಾಷಣೆ ವರುಣ ಕ್ಷೇತ್ರದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಂಬಂಧಪಟ್ಟಿದ್ದು ಎನ್ನುವುದನ್ನು ದಾಖಲೆ ಸಮೇತ ಸಾಬೀತುಪಡಿಸಿದ್ದರೂ ಹೆಚ್.ಡಿ.ಕುಮಾರಸ್ವಾಮಿ ಇಂದು ಮತ್ತೊಂದು ಸುಳ್ಳನ್ನು ಸೃಷ್ಟಿಸಿ ಜನತೆಯ ದಾರಿ ತಪ್ಪಿಸಲು ಹೆಣಗಾಡಿದ್ದಾರೆ. ನಮ್ಮ ಸಂಭಾಷಣೆಯಲ್ಲಿ ಪ್ರಸ್ತಾಪವಾಗಿರುವ ವಿವೇಕಾನಂದ ಅವರು ಮೈಸೂರು ತಾಲೂಕಿನ ಬಿಇಒ ಎನ್ನುವುದು ಸ್ಪಷ್ಟವಾಗಿದ್ದರೂ ಯಾವುದೋ ವರ್ಗಾವಣೆಯ ಪಟ್ಟಿಯಲ್ಲಿನ ವಿವೇಕಾನಂದ ಎಂಬ ಅಧಿಕಾರಿಯ ಹೆಸರು ಹುಡುಕಿ ತನ್ನ ಸುಳ್ಳಿಗೆ ಸಾಕ್ಷಿ ನೀಡುವ ಹತಾಶ ಪ್ರಯತ್ನ ಮಾಡಿದ್ದಾರೆ. ಇದನ್ನು ಮಾನಸಿಕ ಅಸ್ವಸ್ಥತೆ ಎನ್ನದೆ ಬೇರೆ ಏನು ಹೇಳಲು ಸಾಧ್ಯ ಎಂದು ಟೀಕಿಸಿದ್ದಾರೆ.

ರಾಜ್ಯದಲ್ಲಿ ಕುಮಾರಸ್ವಾಮಿ ಎಂಬ ಹೆಸರಿನವರು ಸಾವಿರಾರು ಮಂದಿ ಇದ್ದಾರೆ. ಅವರಲ್ಲಿಯೂ ಒಂದಷ್ಟು ಪಕ್ಕಾ ಕ್ರಿಮಿನಲ್ ಗಳೂ ಇದ್ದಾರೆ. ಹೆಸರಿನ ಕಾರಣಕ್ಕಾಗಿ ಅವರೆಲ್ಲರ ಪಾಪಕರ್ಮಗಳ ಹೊರೆಯನ್ನು ಹೆಚ್.ಡಿ.ಕುಮಾರಸ್ವಾಮಿಯವರ ತಲೆ ಮೇಲೆ ಹೊರಿಸಲಿಕ್ಕೆ ಆಗುತ್ತಾ ಎಲ್ಲಿದಿಯಪ್ಪಾ ನಿಖಿಲ್ ಎಂದು ಸಾರ್ವಜನಿಕ ಸಭೆಯಲ್ಲಿ ಕುಮಾರಸ್ವಾಮಿ ಕೂಗಿದಾಗ ಅಲ್ಲಿ ಎಷ್ಟು ಮಂದಿ ಆ ಹೆಸರಿನವರಿದ್ದರೋ ಏನೋ? ಓಗೊಟ್ಟಿದ್ದು ಇವರ ಮಗ ಮಾತ್ರ ಅಲ್ವಾ? ಉಳಿದವರು ಓಗೊಟ್ಟಿದ್ದರೂ ಅವರನ್ನು ಮಕ್ಕಳು ಎಂದು ಇವರು ಒಪ್ಪಿಕೊಳ್ಳುತ್ತಿದ್ರಾ? ಎಂದು ಪ್ರಶ್ನಿಸಿದ್ದಾರೆ.

600 ಕೋಟಿ ರೂ. ಭ್ರಷ್ಟಾಚಾರ ಆರೋಪ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ವಿರುದ್ಧ ಲೋಕಾಯುಕ್ತಕ್ಕೆ ದೂರು

ಬೆಂಗಳೂರು: ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ 600 ಕೋಟಿ ರೂ. ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಲೋಕಾಯುಕ್ತದಲ್ಲಿ ದೂರು ದಾಖಲಾಗಿದೆ.

ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುವ ವಿಚಾರದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಲಾಗಿದೆ. ಕಪ್ಪು ಪಟ್ಟಿಯಲ್ಲಿರುವ ಕಂಪನಿಗೆ ಟೆಂಡರ್ ನೀಡಲಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ.

ಗುತ್ತಿಗೆದಾರರು ನೀಡುವ ಆಹಾರದಲ್ಲಿ ಗುಣಮಟ್ಟವಿಲ್ಲ ಎಂದು ದೂರಿನಲ್ಲಿ ತಿಳಿಸಲಾಗಿದ್ದು, ಸ್ಥಳೀಯ ಸಂಸ್ಥೆಗಳಿಂದಲೇ ಆಹಾರ ಪೂರೈಸಬೇಕು ಎಂದು ಹೈಕೋರ್ಟ್ ಆದೇಶಿಸಿದೆ. ಆದರೆ, ಆದೇಶ ಉಲ್ಲಂಘಿಸಿ ಕಪ್ಪುಪಟ್ಟಿಗೆ ಸೇರಿದ ಕಂಪನಿಗೆ ಗುತ್ತಿಗೆ ನೀಡಲಾಗಿದೆ ಆರೋಪಿಸಿದ್ದಾರೆ.

ವಕೀಲ ನಟರಾಜ ಶರ್ಮಾ ಅವರು ದೂರು ದಾಖಲಿಸಿದ್ದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಜೆ.ಸಿ.ಪ್ರಕಾಶ್ ಹಾಗೂ ಇಲಾಖೆಯ ನಿರ್ದೇಶಕರ ವಿರುದ್ಧವೂ ದೂರು ನೀಡಲಾಗಿದೆ.

ಭಾರತ ಮತ್ತು ಆಸ್ಟ್ರೇಲಿಯಾ ಪಂದ್ಯಕ್ಕಾಗಿ ಕ್ಷಣಗಣನೆ

ಇಂದಿನ ಪಂದ್ಯಕ್ಕಾಗಿ ಕಿಕ್ಕಿರಿದು ಸೇರಿದ ಜನ

ಗುಜರಾತ: ಬಹುನಿರೀಕ್ಷಿತ ವಿಶ್ವಕಪ್ ಪಂದ್ಯಕ್ಕಾಗಿ ವಿಶ್ವವೇ ಕಾದು ಕುಳಿತಿದೆ. ಇಂದು ಗುಜರಾತ್ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಜನಜಂಗುಳಿ ತುಂಬಲಿದ್ದು, ಭಾರತ ಮತ್ತು ಆಸ್ಟ್ರೇಲಿಯಾ ಪಂದ್ಯವನ್ನು ಎದುರು ನೋಡಲು ಜನರು ಮುಂದಾಗಿದ್ದಾರೆ. ಈಗಾಗಲೇ ಸ್ಟೇಡಿಯಂ ಆಸುಪಾಸಿನಲ್ಲಿ ಜನರು ಬೀಡುಬಿಟ್ಟಿದ್ದಾರೆ.

ಭಾರತ 9 ಪ್ರದರ್ಶನದಲ್ಲೂ ಹಿಂದೇಟು ಹಾಕದೆ ಜಯ ನೆರಳಿನಲ್ಲಿ ದಾಪುಗಾಲಿಡುತ್ತಾ ಫೈನಲ್ ಗೆ ಬಂದಿದೆ. ಇಂದು ಪಂದ್ಯ ಗೆದ್ದರೆ ವಿಶ್ವಕಪ್ ಮುಡಿಗೇರಿಸಲಿದೆ. ಇದು ಪ್ರತಿಯೊಬ್ಬ ಭಾರತೀಯನ ಕನಸಾಗಿಗೆ. ಹಾಗಾಗಿ ಈಗಾಗಲೇ ಎಲ್ಲರು ಇಂದಿನ ಪಂದ್ಯಕ್ಕಾಗಿ ಕಾಯುತ್ತಿದ್ದಾರೆ.

ಈಗಾಗಲೇ ಸ್ಟೇಡಿಯಂ ಬಳಿ ಜನರು ಕ್ಕಿಕ್ಕಿರಿದು ಸೇರಿದ್ದಾರೆ. ಮತ್ತೊಂದೆಡೆ ಟೀಂ ಇಂಡಿಯಾ ಟೀ-ಶರ್ಟ್ ಮಾರಾಟ ಮಾಡುತ್ತಿದ್ದಾರೆ. ಪಂದ್ಯವನ್ನು ಚಂದಗಾಣಿಸಲು ಮತ್ತು ತಂಡಕ್ಕೆ ಸಪೋರ್ಟ್ ನೀಡುವ ಸಲುವಾಗಿ ಅಭಿಮಾನಿಗಳು ಟೀ-ಶರ್ಟ್ ಖರೀದಿಸುತ್ತಿದ್ದಾರೆ.

ಅತ್ತ ಸ್ಟೇಡಿಯಂ ಕೂಡ ನಾಳಿನ ಪಂದ್ಯಕ್ಕಾಗಿ ಸೆಟ್ ಆಗಿದೆ. ಪೊಲೀಸರು ತಪಾಸಣೆ ನಡೆಸುತ್ತಿದ್ದಾರೆ. ಪಂದ್ಯ ವೀಕ್ಷಕರನ್ನು ತಪಾಸಣೆ ನಡೆಸಿ ಸ್ಟೇಡಿಯಂ ಒಳಕ್ಕೆ ಬಿಡಲಿದ್ದಾರೆ.

ಒಂದೆಡೆ ಸುಡು ಬಿಸಿಲು ಮತ್ತೊಂದೆಡೆ ಸ್ಟೇಡಿಯಂ ಹೊರ ಭಾಗದಲ್ಲಿ ಜನರು ಪಂದ್ಯಕ್ಕಾಗಿ ಕಾದು ಕುಳಿತಿರುವುದನ್ನು ಕಂಡರೆ, ಬಹಳ ಕುತೂಹಲದಿಂದ ಕೂಡಿದ ಪಂದ್ಯ ಕಣ್ತುಂಬಿಕೊಳ್ಳಲು ಕಾಯುತ್ತಿದ್ದಾರೆ ಎಂಬುದಕ್ಕೆ ಎರಡು ಮಾತಿಲ್ಲ.

1.25 ಕೋಟಿ ರೂ. ಮೌಲ್ಯದ 2 ಕೆಜಿ ಚಿನ್ನ ವಶ



ಬೆಂಗಳೂರು: ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿದೇಶದಿಂದ ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಒಟ್ಟು 1.25 ಕೋಟಿ ರೂ. ಮೌಲ್ಯದ 2 ಕೆಜಿ ಚಿನ್ನವನ್ನು ಕಸ್ಟಮ್ಸ್ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಮಸ್ಕತ್‌ನಿಂದ ಓಮನ್ ಏರ್ ವಿಮಾನದಲ್ಲಿ (ಡಬ್ಲ್ಯುವೈ 281) ಬಂದಿದ್ದ ಪ್ರಯಾಣಿಕರೊಬ್ಬರಿಂದ 1113.07 ಗ್ರಾಂ ಚಿನ್ನಾಭರಣವನ್ನು ಶುಕ್ರವಾರ ವಶಕ್ಕೆ ಪಡೆಯಲಾಗಿದೆ. ಈತ ತನ್ನ ಸೊಂಟದ ಬೆಲ್ಟ್ ನಲ್ಲಿದ್ದ ಪೌಚ್ ಹಾಗೂ ಹ್ಯಾಂಡ್ ಬ್ಯಾಗ್ ನಲ್ಲಿ ರೂ.68.18 ಲಕ್ಷ ಮೌಲ್ಯದ ಚಿನ್ನ ಅಡಗಿಸಿಟ್ಟಿದ್ದ ಎಂದು ಅಧಿಕಾರಿಗಳಲು ಮಾಹಿತಿ ನೀಡಿದ್ದಾರೆ. ಕೂಡ ಬ್ಯಾಂಕಾಕ್ ನಿಂದ ಬಂದಿದ್ದ ಮೂವರು ಪುರುಷರು ಹಾಗೂ ಕೊಲಂಬೋದಿಂದ ಬಂದಿದ್ದ ಇಬ್ಬರು ಮಹಿಳೆಯರಿಂದ 966ಗ್ರಾಂ ಚಿನ್ನಾಭರಣವನ್ನು ವಶಕ್ಕೆ ಪಡೆಯಲಾಗಿದೆ. ಬ್ಯಾಂಕಾಕ್‌ನಿಂದ ಬಂದ ಇಂಡಿಗೋ ವಿಮಾನ 6ಇ 1056 ರಲ್ಲಿ ಮೂವರು ಪ್ರತ್ಯೇಕ ಪ್ರಯಾಣಿಕರಿಂದ ಚಿನ್ನಾಭರಣವನ್ನು ವಶಕ್ಕೆ ಪಡೆಯಲಾಗಿದೆ. ಈ ಪ್ರಯಾಣಿಕರು ತಮ್ಮ ಕುತ್ತಿಗೆಯಲ್ಲಿ ಎರಡು ಕಚ್ಚಾ ಚಿನ್ನದ ಸರವನ್ನು ಧರಿಸಿದ್ದರು. ಈ ಸರಗಳು 18,13,800 ರೂ ಮೌಲ್ಯವುಳ್ಳದ್ದಾಗಿದ್ದು, ಒಟ್ಟು 300 ಗ್ರಾಂ ತೂಕವಿತ್ತು. ಇನ್ನಿಬ್ಬರು ಮಹಿಳೆಯರು ಒಳ ಉಡುಪು ಸೇರಿದಂತೆ ಇತರೆಡೆ 1,20,920 ರೂ ಮೌಲ್ಯದ ಚಿನ್ನಾಭರಣವನ್ನು ಬಚ್ಚಿದ್ದರು. ಮತ್ತೋರ್ವ ಮಹಿಳೆ ಸಾಕ್ಸ್ ಹಾಗೂ ಪ್ಯಾಂಟ್ ನಲ್ಲಿ 2,78, 116 ರೂಪಾಯಿ ಮೌಲ್ಯದ ಒಟ್ಟು 46 ಗ್ರಾಂ ಚಿನ್ನವನ್ನು ಬಚ್ಚಿಟ್ಟಿದ್ದರು ಎಂದು ತಿಳಿಸಿದ್ದಾರೆ.

ಸ್ಪೀಕರ್ ಸ್ಥಾನವನ್ನು ರಾಜಕೀಯ, ಜಾತಿ ಧರ್ಮದಿಂದ ನೋಡುವಂತಿಲ್ಲ: ಯುಟಿ ಖಾದರ್

ಮಂಗಳೂರು: ಸ್ಪೀಕರ್ ಸ್ಥಾನವನ್ನು ರಾಜಕೀಯ, ಜಾತಿ ಧರ್ಮದಿಂದ ನೋಡುವಂತಿಲ್ಲ ಎಂದು ಸ್ಪೀಕರ್ ಯು.ಟಿ ಖಾದರ್ ಹೇಳಿದ್ದು, ಈ ಮೂಲಕ ಸಚಿವ ಜಮೀರ್ ಅಹ್ಮದ್ ಖಾನ್ ಅವರ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸ್ಪೀಕರ್ ಸ್ಥಾನದ ಬಗ್ಗೆ ಜಮೀರ್ ಅವರ ಹೇಳಿಕೆ ಪ್ರತಿಕ್ರಿಯೆ ನೀಡಿರುವ ಅವರು, ಎಲ್ಲವನ್ನು ಕೂಡ ಮೆಟ್ಟಿ ನಿಂತು ನೋಡಬೇಕಾದ ಸಂವಿಧಾನ ಬದ್ಧವಾದ ಸ್ಥಾನ ಇದಾಗಿದೆ. ನನಗೆ ಗೌರವ ಕೊಡುವುದು ಯು.ಟಿ ಖಾದರ್ ಗೆ ಗೌರವ ಕೊಡೋದು ಅಲ್ಲ. ಸಂವಿಧಾನ ಪೀಠಕ್ಕೆ ಮತ್ತು ಸಭಾಧ್ಯಕ್ಷ ಸ್ಥಾನಕ್ಕೆ ಕೊಡುವುದಾಗಿದೆ. ಅಲ್ಲಿ ಕೂರುವ ನಾವು ಗೌರವ ಉಳಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ನಾನು ಯಾರ ಹೇಳಿಕೆಗೂ ಪ್ರತಿಕ್ರಿಯೆ ನೀಡುವುದಿಲ್ಲ. ಜಾತಿ, ಧರ್ಮದ ಆಧಾರದಲ್ಲಿ ಯಾರು ಆ ಪೀಠದಲ್ಲಿ ನನ್ನನ್ನು ಕೂರಿಸಿಲ್ಲ.

ಅರ್ಹತೆಗೆ ಅನುಗುಣವಾಗಿ ಸಂವಿಧಾನ ಬದ್ಧವಾಗಿ ಕೆಲಸ ನಿರ್ವಹಿಸುವ ವಿಶ್ವಾಸದಿಂದ ಕೂರಿಸಿದ್ದಾರೆ.

ಸಂವಿಧಾನಕ್ಕೆ ಅನುಗುಣವಾಗಿ ಕೆಲಸ ಮಾಡುತ್ತೇನೆ. ನಾನು ಎಲ್ಲರಿಗೂ ಗೌರವ ಕೊಟ್ಟು ಗೌರವ ಪಡೆಯುತ್ತೇನೆ. ಎಲ್ಲರ ಸ್ಪೀಕರ್ ಆಗಿ ಕೆಲಸ ನಿರ್ವಹಿಸುತ್ತೇನೆ. ಸ್ಪೀಕರ್ ಸ್ಥಾನವನ್ನು ಜಾತಿ ಧರ್ಮ ಬಿಟ್ಟು ನೋಡಬೇಕು ಎಂದು ತಿಳಿಸಿದರು.

ತೆಲಂಗಾಣದಲ್ಲಿ ಚುನಾವಣಾ ಪ್ರಚಾರಕ್ಕೆ ತೆರಳಿದ್ದ ಜಮೀರ್ ಅವರು, ಭಾಷಣದ ವೇಳೆ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಮುಸ್ಲಿಮರಲ್ಲಿ 17 ಮಂದಿಗೆ ಟಿಕೆಟ್ ನೀಡಲಾಗಿತ್ತು.

ಈ ಪೈಕಿ 7 ಮಂದಿ ಶಾಸಕರಾಗಿ ಆಯ್ಕೆಯಾಗಿದ್ದೇವೆ. ಅದರಲ್ಲಿ 5 ಜನರಿಗೆ ಕಾಂಗ್ರೆಸ್ ಅಧಿಕಾರ ನೀಡಿದೆ. ನನಗೆ 3 ಖಾತೆ ನೀಡಿ ಮಂತ್ರಿ ಮಾಡಿದೆ. ರಹೀಂ ಖಾನ್ ಮಂತ್ರಿಯಾಗಿದ್ದಾರೆ. ಸಲೀಂ ಅಹ್ಮದ್ ವಿಪ್ ಆಗಿದ್ದಾರೆ. ನಸೀರ್ ಅಹ್ಮದ್ ಸಿಎಂ ಅವರ ರಾಜಕೀಯ ಕಾರ್ಯದರ್ಶಿಯಾಗಿದ್ದಾರೆ.

ರಾಜಕೀಯ ಇತಿಹಾಸದಲ್ಲಿ ಮುಸ್ಲಿಂ ವ್ಯಕ್ತಿಯನ್ನು ಸ್ಪೀಕರ್ ಮಾಡಿರಲಿಲ್ಲ. ಈಗ ಮೊದಲ ಬಾರಿಗೆ ಮುಸ್ಲಿಂ ವ್ಯಕ್ತಿಯನ್ನು ಸ್ಪೀಕರ್ ಮಾಡಿದ್ದು ಕಾಂಗ್ರೆಸ್ ಪಕ್ಷ. ಈಗ ದೊಡ್ಡ ದೊಡ್ಡ ಬಿಜೆಪಿ ನಾಯಕರು ಕೂಡಾ ಸ್ಪೀಕರ್ ಯುಟಿ ಖಾದರ್ ಅವರಿಗೆ ನಮಸ್ಕಾರ ಎನ್ನುತ್ತಾರೆ. ಇದನ್ನು ಮಾಡಿದ್ದು ಯಾರು? ಕಾಂಗ್ರೆಸ್ ಪಕ್ಷ ಎಂದು ಹೇಳಿಕೆ ನೀಡಿ ವಿವಾದ ಸೃಷ್ಟಿಸಿದ್ದರು.

ಟೀಂ ಇಂಡಿಯಾದ ಕೇಸರಿ ಜೆರ್ಸಿಗೆ ಮಮತಾ ಬ್ಯಾನರ್ಜಿ ಆಕ್ಷೇಪ

ಕೊಲ್ಕತ್ತಾ: ಬಿಜೆಪಿ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ, ಭಾರತೀಯ ಕ್ರಿಕೆಟ್ ತಂಡದ ಅಭ್ಯಾಸದ ವೇಳೆ ತೊಡುವ ಕೇಸರಿ ಜೆರ್ಸಿಯನ್ನು ಅವರು ವಿರೋಧಿಸಿದ್ದಾರೆ.

ಕೇಂದ್ರ ಸರ್ಕಾರವು ಹಲವು ಸಂಸ್ಥೆಗಳನ್ನು ಕೇಸರೀಕರಣಗೊಳಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಪೊಸ್ತಾ ಬಝಾರ್ ನಲ್ಲಿ ಜಗಧಾತ್ರಿ ಪೂಜಾದ ಉದ್ಘಾಟನೆ ವೇಳೆ ಮಾತನಾಡಿದ ಅವರು, ಟೀಂ ಇಂಡಿಯಾದ ಅಭ್ಯಾಸ ಜೆರ್ಸಿಗಳಲ್ಲಿ ಮಾತ್ರವಲ್ಲದೆ, ಮೆಟ್ರೋ ಸ್ಟೇಷನ್ ಗಳಿಗೂ ಕೇಂದ್ರ ಸರ್ಕಾರ ಕೇಸರಿ ಬಣ್ಣ ಹೊಡೆಸುತ್ತಿದೆ ಎಂದಿದ್ದಾರೆ.

ಇದಕ್ಕೆ ಅಸಮಾಧಾನ ವ್ಯಕ್ತಪಡಿಸಿರುವ ಮಮತಾ ಬ್ಯಾನರ್ಜಿ, 'ಅವರು ಇಡೀ ದೇಶಕ್ಕೆ ಕೇಸರಿ ಬಣ್ಣ ಬಳಿಯಲು ಪ್ರಯತ್ನಿಸುತ್ತಿದ್ದಾರೆ. ನಮ್ಮ ಭಾರತೀಯ ಆಟಗಾರರ ನನಗೆ ಹೆಮ್ಮೆ ಇದೆ ಮತ್ತು ಅವರು ವಿಶ್ವಕಪ್ ನಲ್ಲಿ ಚಾಂಪಿಯನ್ ಆಗುತ್ತಾರೆ ಎಂದು ನಾನು ನಂಬುತ್ತೇನೆ. ಆದರೆ, ಅವರಲ್ಲಿಯೂ ಬಿಜೆಪಿ ಕೇಸರಿ ಬಣ್ಣವನ್ನು ತಂದಿದೆ. ಈಗ ನಮ್ಮ ಆಟಗಾರರು ಕೇಸರಿ ಬಣ್ಣದ ಜೆರ್ಸಿಯಲ್ಲಿ ಅಭ್ಯಾಸ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಕುಮಾರಸ್ವಾಮಿ ಆರೋಪಗಳಲ್ಲಿ ಯಾವುದೇ ಹುರುಳಿಲ್ಲ: ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್

ನ.27 ರಂದು ವಿಡಿಯೋ ಕಾನ್ಫರನ್ಸ್ ಮೂಲಕ ಪಿಂಚಣಿ ಅದಾಲತ್ ಆಯೋಜನೆ

ಧಾರವಾಡ: ಕರ್ನಾಟಕ ಮಹಾಲೇಖಪಾಲರ ಕಚೇರಿಯಿಂದ ನವೆಂಬರ್ 27 ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ವಿಡಿಯೋ ಕಾನ್ಫರನ್ಸ್ ಮೂಲಕ ಪಿಂಚಣಿ ಅದಾಲತ್ನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಧಾರವಾಡ, ಹುಬ್ಬಳ್ಳಿ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ ಮತ್ತು ಹಾವೇರಿ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆ ಮತ್ತು ಅಹವಾಲುಗಳಿಗೆ ಸಂಬಂಧಿಸಿದಂತೆ ಪಿಂಚಣಿ ಅದಾಲತ್ತದಲ್ಲಿ ಭಾಗವಹಿಸಿ ತಮ್ಮ ಕುಂದುಕೊರತೆಗಳನ್ನು ಪರಿಹರಿಸಿಕೊಳ್ಳಬಹುದು.

ಈ ಪಿಂಚಣಿ ಅದಾಲತ್ತೆ ಮಹಾಲೇಖಾಪಾಲರ ಕಚೇರಿಯಿಂದ ಡೆಪ್ಯೂಟಿ ಆಕೌಂಟಂಟ್ ಜನರಲ್, ಹಿರಿಯ ಲೆಕ್ಕಾಧಿಕಾರಿಗಳು ಹಾಗೂ ವ್ಯವಸ್ಥಾಪಕರು ಎಸ್.ಬಿ.ಐ (ಸಿ.ಪಿ.ಪಿ.ಸಿ), ಕೆನರಾ ಬ್ಯಾಂಕ್ (ಸಿ.ಪಿ.ಪಿ.ಸಿ), ಬ್ಯಾಂಕ್ ಆಫ್ ಬರೋಡ (ಸಿ.ಪಿ.ಪಿ.ಸಿ), ಯೂನಿಯನ್ ಬ್ಯಾಂಕ್ ಇಂಡಿಯಾ (ಸಿ.ಪಿ.ಪಿ.ಸಿ), ಮತ್ತು ಧಾರವಾಡ, ಹುಬ್ಬಳ್ಳಿ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ ಮತ್ತು ಹಾವೇರಿ ಜಿಲ್ಲೆಗಳ ಖಜಾನೆ ಇಲಾಖೆಯ ಉಪನಿರ್ದೇಶಕರು ಮತ್ತು ಸಹಾಯಕ ನಿರ್ದೇಶಕರು ಉಪಸ್ಥಿತರಿದ್ದು, ಕಾರ್ಯಕ್ರಮದ ಸಮನ್ವಯ ಸಾಧಿಸುವರು. ಸಂಬಂಧಿಸಿದ ಜಿಲ್ಲೆಯ ಪಿಂಚಣಿದಾರರು ಕಾರ್ಯಕ್ರಮದಲ್ಲಿ ಭಾಗವಹಿಸಿ ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮ

ಧಾರವಾಡ: ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಧಾರವಾಡ ಹಾಗೂ ಅಳ್ನಾವರ ತಾಲ್ಲೂಕುಗಳ ವತಿಯಿಂದ 2023–24ನೇ ಸಾಲಿನ ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದ ಉಳಿಕೆ ಅನುದಾನದಲ್ಲಿ ಎಸ್.ಸಿ.ಎಸ್.ಪಿ, ಟಿ.ಎಸ್.ಪಿ ಫಲಾನುಭವಿಗಳಿಗೆ ಒಂದು ಮಿಶ್ರತಳಿ ಹಸು ಘಟಕವನ್ನು ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಗದಿತ ನಮೂನೆಯ ಅರ್ಜಿಗಳನ್ನು ತ್ರಿಪ್ರತಿಯಲ್ಲಿ ನವೆಂಬರ್ 25 ರೊಳಗಾಗಿ ಹತ್ತಿರದ ಪಶುವೈದ್ಯಕೀಯ ಸಂಸ್ಥೆಗೆ ಸಲ್ಲಿಸಬಹುದು. ಅರ್ಜಿಯೊಂದಿಗೆ ಆಧಾರ್ಕಾರ್ಡ, ಬಿಪಿಎಲ್ ಕಾರ್ಡ್ ಪ್ರತಿ ಮತ್ತು ಜಾತಿ ಪ್ರಮಾಣ ಪತ್ರ ಹಾಗೂ ಹಾಲು ಉತ್ಪಾದಕರ ಸಹಕಾರಿ ಸಂಘದ ಸದಸ್ಯತ್ವ ಪ್ರತಿ ಲಗತ್ತಿಸಬೇಕು.

ಧಾರವಾಡ ತಾಲೂಕಿಗೆ ಎಸ್.ಸಿ.ಎಸ್.ಪಿ ಹೈನುಗಾರಿಕೆ–01 ಟಿ.ಎಸ್.ಪಿ, ಹೈನುಗಾರಿಕೆ–02, ಹಾಗೂ ಅಳ್ನಾವರ ತಾಲೂಕಿಗೆ ಸಂಬಂಧಿಸಿದಂತೆ ಎಸ್.ಸಿ.ಎಸ್.ಪಿ ಹೈನುಗಾರಿಕೆ–01 ಟಿ.ಎಸ್.ಪಿ,ಹೈನುಗಾರಿಕೆ–01 ಗುರಿಗಳಿವೆ. ಫಲಾನುಭವಿಗಳು ಕಡ್ಡಾಯವಾಗಿ ಫ್ರೂಟ್ಸ್ ಐಡಿ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರ ಪಶುವೈದ್ಯಕೀಯ ಸಂಸ್ಥೆಯನ್ನು ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಮುಖ್ಯಪಶುವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ.21 ರಂದು ಶ್ರೀ ಕನಕದಾಸರ ಜಯಂತಿ ಪೂರ್ವ ಸಿದ್ಧತಾ ಸಭೆ

ಧಾರವಾಡ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಶ್ರೀ ಕನಕದಾಸರ ಜಯಂತಿಯನ್ನು ನವೆಂಬರ್ 30 ರಂದು ಆಚರಿಸಲಾಗುತ್ತದೆ.

ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ನವೆಂಬರ್ 21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ನೂತನ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಭಾಗವಹಿಸಿ ಸಲಹೆಗಳನ್ನು ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿ.9 ರಂದು ರಾಷ್ಟ್ರೀಯ ಲೋಕ ಅದಾಲತ್

ಧಾರವಾಡ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಗಳ ಆದೇಶದ ಮೇರೆಗೆ ಧಾರವಾಡ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಡಿಸೆಂಬರ್ 09 ರಂದು ಶನಿವಾರ ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ "ರಾಷ್ಟ್ರೀಯ ಲೋಕ ಅದಾಲತ್" ಆಯೋಜಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶೆ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಡಿ.09 ರಂದು ಜರುಗುವ ಲೋಕಅದಾಲತ್ತದಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ಸಿವಿಲ್ ವ್ಯಾಜ್ಯ, ಮೋಟಾರ್ ವಾಹನ ಅಪಘಾತ ಪರಿಹಾರದ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ವಿದ್ಯುತ್ ಮಂಡಳಿ ಸಂಬಂಧಿತ ಪ್ರಕರಣಗಳು, ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು, ಬ್ಯಾಂಕ್, ಸಹಕಾರಿ ಸಂಘ, ಖಾಸಗಿ ವ್ಯಕ್ತಿಗಳ ನಡುವಿನ ಚೆಕ್ ಅಮಾನ್ಯ, ಹಣ ವಸೂಲಾತಿ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳು, ವೈವಾಹಿಕ ಪ್ರಕರಣಗಳು (ವಿವಾಹ ವಿಚ್ಛೇದನ ಹೊರತು ಪಡಿಸಿ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳು, ಕಾನೂನಿನಲ್ಲಿ ರಾಜಿ ಆಗಬಹುದಾದ ಎಲ್ಲಾ ತರಹದ ಕ್ರಿಮಿನಲ್ ಪ್ರಕರಣಗಳನ್ನು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮತ್ತು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯನಿರ್ವಾಹಕ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಮೂರ್ತಿಗಳ ಆಶಯದಂತೆ ಲೋಕ–ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸಾರ್ವಜನಿಕರು ವಿಶೇಷವಾಗಿ ಕಕ್ಷಿಗಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಲೋಕ ಅದಾಲತ್ನ ಸದುಪಯೋಗ ಪಡಿಸಿಕೊಳ್ಳುವಂತೆ ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ಎಫ್. ದೊಡ್ಡಮನಿ ಅವರು ಕೋರಿದ್ದಾರೆ.

ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸಿಗೆ ಆಕಸ್ಮಿಕ ಬೆಂಕಿ : ಚಾಲಕನ ಚಾಣಾಕ್ಷತನದಿಂದ ಬಚಾವಾದ ಪ್ರಯಾಣಿಕರು

ಬೆಳಗಾವಿ : ಸಂಚರಿಸುತ್ತಿದ್ದ ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸಿಗೆ ಆಕಸ್ಮಿಕವಾಗಿ ಬೆಂಕಿ ತಗುಲಿ ಬಸ್ಸು ಸಂಪೂರ್ಣ ಬೆಂಕಿಗೆ ಆಹುತಿಯಾಗಿದ್ದು, ಬಸ್ ಚಾಲಕನ ಚಾಣಾಕ್ಷತನದಿಂದ ಎಲ್ಲ ಪ್ರಯಾಣಿಕರು ಬಚಾವಾದ ಘಟನೆ ಜಿಲ್ಲೆಯ ಹುಕ್ಕೇರಿ ತಾಲೂಕಿನ ನರಸಿಂಗಪೂರ ಬಳಿ ಪೂನಾ ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 4 ರಲ್ಲಿ ನಡೆದಿದೆ.

ಪಿಲಿಸಿಟಿ ಕಂಪನಿಯರಿಂದ ಬಡವರ ಕನಸಿನ ಮನೆ ನಿರ್ಮಾಣ: ಸಚಿವ ಸತೀಶ ಜಾರಕಿಹೊಳಿ

ಬೆಳಗಾವಿ: "ಪಿಲಿಸಿಟಿ ಕಂಪನಿಯರಿಂದ ಬಡವರಿಗೆ ಕೈಗೆ ಎಟಕುವ ದರದಲ್ಲಿ ಸುಸಜ್ಜಿತವಾದ ಕನಸಿನ ಮನೆ ಬೆಳಗಾವಿಯಲ್ಲಿ ನಿರ್ಮಾಣವಾಗುತ್ತಿರುವುದು ಹೆಮ್ಮೆಯ ಸಂಗತಿ" ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಹೇಳಿದರು.

ತಾಲೂಕಿನ ಕಾಕತಿ ಗ್ರಾಮದ ಹೊರವಲಯದಲ್ಲಿ ಪಿಲಿಸಿಟಿ ಕಂಪನಿಯವರಿಂದ ನಿರ್ಮಾಣವಾದ ಉತ್ತರ ಕರ್ನಾಟಕ ಬೃಹತ ನೂತನ ಸ್ವರ್ಣ– ಗೃಹ ಉದ್ಘಾಟಿಸಿ ಅವರು ಮಾತನಾಡಿದರು.

ಕಡಿಮೆ ದರದಲ್ಲಿ ಮನೆಗಳು ನಿರ್ಮಾಣ ಮಾಡಿ, ಜನರ ಆಸೆಯನ್ನು ಪಿಲಿಸಿಟಿ ಕಂಪನಿಯ ಸಂಸ್ಥಾಪಕ ಪ್ರಣವ ಶರ್ಮ ಈಡೇರಿಸಿದ್ದಾರೆ. ಹೀಗೆ ಕೋಲಾರ, ತುಮಕೂರು ಜಿಲ್ಲೆಯ ಜನರಿಗಾಗಿ ಸ್ವರ್ಣ ಗೃಹ ಮನೆಗಳನ್ನು ನಿರ್ಮಾಣ ಮಾಡಿ ಯಶಸ್ವಿಯಾಗಿದಾರೆ. ಆಧುನಿಕ ತಂತ್ರಜ್ಞಾನದೊಂದಿಗೆ ಒಂದೆ ಸೂರಿನಡಿ ಎಲ್ಲಾ ಸೌಲಭ್ಯಗಳನ್ನು ಈ ಮನೆಗಳು ಹೊಂದಿವೆ ಎಂದ ಅವರು, ನೌಕರಿ ಜತೆ ಕಡಿಮೆ ದರದಲ್ಲಿ ಮನೆಗಳು, ಅದು ಕಾಕತಿ ಗ್ರಾಮದಲ್ಲಿ ನಿರ್ಮಾಣವಾಗಿರುವುದು ಹೆಮ್ಮೆಯ ಪಡುವ ವಿಷಯ ಎಂದು ಖುಷಿ ವ್ಯಕ್ತ

ಪಡಿಸಿದರು.

ಏಕಸ್ ಕಂಪೆನಿಯು ಕೂಡ ಈ ಭಾಗದ ಸಾವಿರಾರು ಜನರಿಗೆ ನೆರಳಾಗಿದೆ. ಜನತೆಯ ಆರ್ಶೀವಾದಿಂದ ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಆಡಳಿತಕ್ಕೆ ಬಂದಿದೆ. ಈ ಭಾಗದಲ್ಲಿ ಹೆಚ್ಚೆಚ್ಚು ತಂತ್ರಜ್ಞಾನಯುಳ್ಳ ಕಂಪನಿ ತರಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಸುಸಜ್ಜಿತವಾದ ನಿರ್ಮಾಣ ಮಾಡಿರುವ ಶರ್ಮ ಅವರಿಗೆ ಸಂಪೂರ್ಣ ಸಹಾಯ, ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು. ಪಿಲಿಸಿಟಿ ಅವರು ಉತ್ತಮ ಸ್ಥಾನಕ್ಕೆ ಬೆಳೆದು ಈ ಭಾಗದ ಜನರಿಗೆ ಇನ್ನಷ್ಟು ನೆರಳಾಗಲಿ ಎಂದು ಹಾರೈಸಿದರು.

ಪಿಲಿಸಿಟಿ ಕಂಪನಿಯ ಸಂಸ್ಥಾಪಕ ಪ್ರಣವ ಶರ್ಮಾ ಅವರು ಮಾತನಾಡಿ, "ಸುಸಜ್ಜಿತವಾದ ಜೀವನ ನಡೆಸಲು ಆಧುನಿಕ ತಂತ್ರಜ್ಞಾನ ಯುಳ್ಳ ಮನೆಗಳನ್ನು ಬೆಳಗಾವಿಯಲ್ಲಿ ನಿರ್ಮಾಣ ಮಾಡಲಾಗಿದೆ" ಇದು ನಿಮ್ಮ ಸ್ವರ್ಣ ಮನೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಭಾಗದ ದೀಮಂತ ನಾಯಕ, ಬಡವರಿಗಾಗಿ ವಿಷೇಶ ಕಾಳಜಿಯುಳ್ಳ ಜನನಾಯಕರಾದ ಸಚಿವ ಸತೀಶ ಜಾರಕಿಹೊಳಿ ಅವರು ಮನೆ ನಿರ್ಮಾಣ ಮಾಡಲು ಬಹಳ ಪ್ರೋತ್ಸಾಹ ಕೊಟ್ಟಿದ್ದಾರೆ. ಅವರ ಉದ್ದೇಶ ನಮ್ಮ ಉದ್ದೇಶ ಎರಡು ಒಂದೇ ಆಗಿರುವುದರಿಂದ ಬಡವರ ಕನಸಿನ ಮನೆ ನಿರ್ಮಾಣ ಮಾಡಲು ಸಾಧ್ಯವಾಗಿದೆ ಹೇಳಿದರು.

ಇದೇ ವೇಳೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ವೇದಿಕೆ ಮಲಿದ್ದ ಗಣ್ಯರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ, ಮಹಾಂತೇಶ ಮಗದುಮ್ಮ , ಕಿರಣ ರಜಪೂತ , ಸಿದ್ದು ಸುಣಗಾರ, ಅರುಣ ಕಟಾಂಬಳೆ ಸೇರಿದಂತೆ ಇತರರು ಇದ್ದರು.

ಸಹಕಾರಿ ಬ್ಯಾಂಕ್ ನಲ್ಲಿ 10 ಕೋಟಿಗೂ ಅಧಿಕ ಅಕ್ರಮ; ಲೋಕಾಯುಕ್ತಕ್ಕೆ ದೂರು

ಬಾಗಲಕೋಟೆ: ಅಲ್ಪಸಂಖ್ಯಾತ ಪತ್ತಿನ ಸಹಕಾರಿ ಬ್ಯಾಂಕ್ ನಲ್ಲಿ 10 ಕೋಟಿಗೂ ಅಧಿಕ ಅಕ್ರಮವೆಸಗಿರುವ ಘಟನೆ ಬಾಗಲಕೋಟೆಯಲ್ಲಿ ನಡೆದಿದೆ.

ಸಾಲದ ಹೆಸರಲ್ಲಿ 10 ಕೋಟಿಗೂ ಅಧಿಕ ಹಣ ಗೋಲ್ ಮಾಲ್ ಮಾಡಲಾಗಿದ್ದು, ಆಡಳಿತ ಮಂಡಳಿ, ಮ್ಯಾನೇಜರ್, ಸಿಇಒ ಗಳಿಂದಲೇ ಅಕ್ರಮ ನಡೆದಿದೆ. ಸಾಮಾಜಿಕ ಕಾರ್ಯಕರ್ತ ನಾಮದೇವ ಸಾಲಾಪುರ ಎಂಬುವವರು ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ.

ಲೋಕಾಯುಕ್ತ ತನಿಖೆಯಲ್ಲಿಯೂ ಸಹಕಾರಿ ಬ್ಯಾಂಕ್ ಅಕ್ರಮ ಬಯಲಾಗಿದೆ. ಈ ಹಿನ್ನೆಲೆಯಲ್ಲಿ ಆಡಳಿತ ಮಂಡಳಿಗೆ ಲೋಕಾಯುಕ್ತ ನೋಟೀಸ್ ನೀಡಿದೆ. ಸಹಕಾರಿ ಬ್ಯಾಂಕ್ ನ ನಿಯಮ ಉಲ್ಲಂಘನೆ ಮಾಡಿ ಕೋಟಿ ಕೋಟಿ ಹಣವನ್ನು ಸಾಲದ ರೂಪದಲ್ಲಿ ವಿತರಣೆ ಮಾಡಲಾಗಿದೆ.

ಒಂದು ಕುಟುಂಬದ 24 ಜನರು, ಇನ್ನೊಂದು ಕುಟುಂಬದ 15 ಜನರು ಹಾಗೂ ಇನ್ನೊಂದು ಕುಟುಂಬದ 3 ಜನರಿಗೆ ಸಾಲ ನೀಡಲಾಗಿದೆ.

ಮೂರು ಕುಟುಂಬಗಳು ಮೂರು ವಿವಿಧ ಸಮೂಹ ರಚಿಸಿಕೊಂಡು ಬರೋಬ್ಬರಿ 10 ಕೋಟಿ 66 ಲಕ್ಷ ಸಾಲ ಪಡೆದಿದ್ದಾರೆ. ಬಡ್ಡಿಯನ್ನು ಮನಬಂದಂತೆ ಫಿಕ್ಸ್ ಮಾಡಲಾಗಿದೆ.

ಈ ಮೂಲಕ ಸಹಕಾರಿ ಬ್ಯಾಂಕ್ ನಲ್ಲಿ ಗೋಲ್ ಮಾಲ್ ನಡೆಸಲಾಗಿರುವುದು ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಆಡಳಿತ ಮಂದಳಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ.

ರೈಲುಗಳ ಒಳಗೆ ಧೂಮಪಾನ: 285 ಪ್ರಕರಣ ದಾಖಲು

ಬೆಂಗಳೂರು: ರೈಲು ಅಥವಾ ರೈಲ್ವೇ ಆವರಣಗಳಲ್ಲಿ ಧೂಮಪಾನ ಮಾಡಿದ ಹಿನ್ನೆಲೆಯಲ್ಲಿ ರೈಲ್ವೇ ಕಾಯಿದೆಯ ಸೆಕ್ಷನ್ 167 ರ ಅಡಿಯಲ್ಲಿ 285 ಪ್ರಕರಣಗಳು ದಾಖಲಾಗವೆ ಎಂದು ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಯೋಗೇಶ್ ಮೋಹನ್ ಅವರು ಹೇಳಿದ್ದಾರೆ.

ಬೆಂಗಳೂರು ವಿಭಾಗದಾದ್ಯಂತ ಅಗ್ನಿ ಸುರಕ್ಷತೆ ಜಾಗೃತಿ ಅಭಿಯಾನವನ್ನು ನಡೆಸಲಾಗಿದ್ದು, ಈ ವರ್ಷದ ಏಪ್ರಿಲ್ ಮತ್ತು ಅಕ್ಟೋಬರ್ ನಡುವೆ ರೈಲುಗಳಲ್ಲಿ ಪಟಾಕಿ ಮತ್ತು ಬೆಂಕಿ ಹೊತ್ತಿಸುವ ವಸ್ತುಗಳನ್ನು ಸಾಗಿಸುವ ವ್ಯಕ್ತಿಗಳ ವಿರುದ್ಧ ರೈಲ್ವೆ ಕಾಯ್ದೆಯಡಿ ಐದು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಎಂದು ಮಾಹಿತಿ ನೀಡಿದ್ದಾರೆ.

ಒಟ್ಟು 30 ನಿಲ್ದಾಣಗಳಲ್ಲಿ ಅಭಿಯಾನ ನಡೆಸಲಾಗಿದ್ದು, 191 ರೈಲುಗಳಲ್ಲಿ ತಪಾಸಣೆ ನಡೆಸಲಾಗಿದೆ.3,000 ರೈಲ್ವೆ ಸಿಬ್ಬಂದಿ ಮತ್ತು 5,056 ಪ್ರಯಾಣಿಕರಿಗೆ ಸುರಕ್ಷತಾ ಕ್ರಮಗಳ ಕುರಿತು ಕೌನ್ಸೆಲಿಂಗ್ ನೀಡಲಾಗಿದೆ. 90 ಕ್ಕೂ ಹೆಚ್ಚು ಪ್ರಯಾಣಿಕರಿಗೆ ಅಗ್ನಿ ಶಾಮಕ ಸಾಧನಗಳನ್ನು ಬಳಸುವ ಕುರಿತು ತರಬೇತಿ ನೀಡಲಾಗಿದೆ, 10000 ಕ್ಕೂ ಹೆಚ್ಚು ಮಂದಿಗೆ ಸಂದೇಶಗಳನ್ನು ರವಾನಿಸಲಾಗಿದೆ. 3,500 ಕರಪತ್ರಗಳನ್ನು ವಿತರಿಸಲಾಗಿದೆ ಮತ್ತು 11 ರೈಲು ನಿಲ್ದಾಣಗಳಲ್ಲಿ ನಾಟಕಗಳನ್ನು ಪ್ರದರ್ಶಿಸಲಾಗಿದೆ ಎಂದು ತಿಳಿಸಿದರು.

ಬೆಳಗಾವಿ ದಂಡು ಮಂಡಳಿ ಮೇಲೆ ಸಿಬಿಐ ದಾಳಿ

ಬೆಳಗಾವಿ: ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಬೆಳಗಾವಿಯ ದಂಡು ಮಂಡಳಿ ಕಚೇರಿ ಮೇಲೆ ಸಿಬಿಐ ಅಧಿಕಾರಿಗಳು ದಾಳಿ ಮಾಡಿರುವ ಘಟನೆ ನಡೆದಿದೆ.

ಬೆಳಗಾವಿಯ ಕ್ಯಾಂಪ್ ಪ್ರದೇಶದಲ್ಲಿರುವ ದಂಡು ಮಂಡಳಿ ಕಚೇರಿ ಮೇಲೆ ದಾಳಿ ಮಾಡಿದ ಸಿಬಿಐ ಅಧಿಕಾರಿಗಳು ದಂಡು ಮಂಡಳಿಯ ಕೆಲವು ಅಧಿಕಾರಿಗಳನ್ನು ತೀವ್ರ ವಿಚಾರಣೆ ನಡೆಸುತ್ತಿದ್ದಾರೆ. ಬೆಂಗಳೂರು, ದೆಹಲಿ ಸಿಬಿಐ ಅಧಿಕಾರಿಗಳು ಜಂಟಿ

ಕಾರ್ಯಾಚರಣೆ ನಡೆಸಿದ್ದು, ದಂಡು ಮಂಡಳಿಯ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಅಭ್ಯರ್ಥಿಯೊಬ್ಬರು ನೀಡಿದ ದೂರಿನ ಅನ್ವಯ ಸಿಬಿಐ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಕೇಂದ್ರದ ರಕ್ಷಣಾ ಇಲಾಖೆಯ ವ್ಯಾಪ್ತಿಗೆ ಒಳಪಡುವ ಇದು ರಾಜ್ಯದ ಏಕೈಕ ದಂಡು ಮಂಡಳಿ ಕಚೇರಿ ಆಗಿದೆ. 2021ರಲ್ಲಿ ಕ್ಲರ್ಕ, ಸ್ಟೆನೋಗ್ರಾಫರ್ ಸೇರಿ 19 ಅಭ್ಯರ್ಥಿಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ಎಸಗಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಎಲ್ಲಾ ವಿಚಾರಗಳ ಬಗ್ಗೆ ಸಿಬಿಐ ಅಧಿಕಾರಿಗಳು ಮಾಹಿತಿ ಕಲೆ ಹಾಕುತ್ತಿದ್ದಾರೆ.

ಏಣ್ಣೆ ಹೊಡೆದು ಫುಲ್ ಟೈಟಾದ ಎಎಸ್ಐ ಅಮಾನತು

ಕೋಲಾರ: ಕುಡಿದು ಫುಲ್ ಟೈಟ್ ಆಗಿ ಬಾರ್ ಸಿಬ್ಬಂದಿ ಮೇಲೆ ಹಲ್ಲೆಗೆ ಮುಂದಾಗಿದ್ದ ಕೋಲಾರ ಗ್ರಾಮಾಂತರ ಪೊಲೀಸ್ ಠಾಣೆಯ ಎಎಸ್ಐ ಕೆ.ಸಿ ನಾರಾಯಣ ಸ್ವಾಮಿಯವರನ್ನು ಅಮಾನತು ಮಾಡಲಾಗಿದೆ.

ನ. 11ರ ರಾತ್ರಿ ಸಮಯದಲ್ಲಿ ಕೋಲಾರ ನಗರದ ಬಂಗಾರಪೇಟೆ ವೃತ್ತದ ಅಶೋಕ್ ಬಾರ್ನಲ್ಲಿ ನಮಸ್ಕಾರ ಮಾಡಿಲ್ಲ ಎ

ಹೊಸ ಕೃಷಿ ತಂತ್ರಜ್ಞಾನಗಳತ್ತ ಗಮನ ಹರಿಸಿ: ವಿಜ್ಞಾನಿಗಳಿಗೆ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಹಸಿರು ಕ್ರಾಂತಿ ನಿರಂತರ ಪ್ರಕ್ರಿಯೆಯಾಗಬೇಕು, ವಿಜ್ಞಾನಿಗಳು ಹೊಸ ಕೃಷಿ ತಂತ್ರಜ್ಞಾನಗಳತ್ತ ಗಮನ ಹರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಹೇಳಿದರು.

ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿಕೆವಿಕೆ) ಆವರಣದಲ್ಲಿ ನಾಲ್ಕು ದಿನಗಳ ಕೃಷಿ ಮೇಳ–2023 ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿ ವಿಶ್ವವಿದ್ಯಾಲಯಗಳು ನಡೆಸುವ ಸಂಶೋಧನೆಗಳ ಫಲ ರೈತರಿಗೆ ಸಿಗಬೇಕು. ನೀವು ನಡೆಸುವ ಸಂಶೋಧನೆಗಳಿಗೆ ನೆರವು, ಪ್ರೋತ್ಸಾಹ ನೀಡಲು ನಮ್ಮ ಸರ್ಕಾರ ಸದಾ ಸಿದ್ಧವಾಗಿದೆ ಎಂದು ಹೇಳಿದರು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ (ಯುಎಎಸ್) ಕೇವಲ ಪದವೀಧರರನ್ನು ತಯಾರು ಮಾಡುವ ಸಂಸ್ಥೆಗಳಲ್ಲ. ಕೃಷಿ ವಿದ್ಯಾರ್ಥಿಗಳನ್ನು ತಯಾರಿಸುವ ಜೊತೆಗೆ ಹೊಸ ತಳಿಗಳು, ನೂತನ ತಂತ್ರಜ್ಞಾ ಅಭಿವೃದ್ಧಿ, ಭೂಮಿಯ ಫಲವತ್ತತೆ ಕಾಪಾಡಿಕೊಳ್ಳುವುದು ಸೇರಿದಂತೆ ಹಲವು ಅಗತ್ಯ ವಿಷಯಗಳಿಗೆ ಆದ್ಯತೆ ನೀಡಬೇಕು. ಸಂಶೋಧನೆಗಳಿಗೆ ಒತ್ತು ನೀಡಿ ಅವುಗಳ ಫಲ ರೈತರನ್ನು ತಲುಪುವಂತೆ ನೋಡಿಕೊಳ್ಳಬೇಕು. ಸರ್ಕಾರ ನಿಮಗೆ ಅಗತ್ಯವಿರುವ ಬೆಂಬಲ, ಪ್ರೋತ್ಸಾಹ ನೀಡಲು ಸಿದ್ಧವಿದೆ ಎಂದು ಭರವಸೆ ನೀಡಿದರು.

"ರಾಜಸ್ಥಾನವನ್ನು ಹೊರತು ಪಡಿಸಿದರೆ ಇಡೀ ದೇಶದಲ್ಲಿ ಅತಿ ದೊಡ್ಡ ಒಣಭೂಮಿಯನ್ನು

ರಾಜ್ಯ ಹೊಂದಿದೆ.

ನಮ್ಮ ರಾಜ್ಯದ ಬಹುತೇಕ ರೈತರು ಕೃಷಿಯನ್ನೇ ನಂಬಿ ಜೀವನ ಸಾಗಿಸುತ್ತಿದ್ದಾರೆ. ನಮ್ಮ ರೈತರು ಕೃಷಿಯನ್ನು ಮುಂದುವರಿಸಬೇಕಾದರೆ ಕ್ಷೇತ್ರವನ್ನು ಲಾಭದಾಯಕವಾಗಿಸಬೇಕು.

ಹವಾಮಾನ ವೈಪರೀತ್ಯ ಮತ್ತು ಹೆಚ್ಚಿನ ವೆಚ್ಚಗಳಿಂದಾಗಿ ಅನೇಕ ರೈತರು ಇದೀಗ ತಮ್ಮ ಭೂಮಿಯನ್ನು ಮಾರಾಟ ಮಾಡುತ್ತಿದ್ದಾರೆ. "ರೈತರು ಹೆಚ್ಚಿನ ಲಾಭ ಗಳಿಸಲು ಸಹಾಯ ಮಾಡಲು ವಿಜ್ಞಾನಿಗಳು ಹೊಸ ತಂತ್ರಜ್ಞಾನಗಳತ್ತ ಗಮನ ಹರಿಸಬೇಕು. ಹವಾಮಾನ ಬದಲಾವಣೆ ಹಿನ್ನೆಲೆಯಲ್ಲಿ ರೈತರಿಗೆ ನೆರವಾಗಲು ಬರ–ನಿರೋಧಕ ಬೆಳೆ ತಳಿಗಳ ಪರಿಚಯಿಸಬೇಕು. ಇದಕ್ಕೆ ರಾಜ್ಯ ಸರ್ಕಾರದ ಬೆಂಬಲವಿರಲಿದೆ ಎಂದು ಹೇಳಿದರು.

ಸರ್ಕಾರ ರೈತರಿಗೆ ನೆರವು ಮತ್ತು ವಿಮೆಯನ್ನು ನೀಡಿದರೂ ಅದು ರೈತರಿಗೆ ಬೆಳೆ ನಷ್ಟವನ್ನು ನಿವಾರಿಸಲು ಸಹಾಯ ಮಾಡುವುದಿಲ್ಲ. ಈ ವರ್ಷ 33,000 ಕೋಟಿ ರೂಪಾಯಿ ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ಮಾರ್ಗಸೂಚಿಗಳ ಪ್ರಕಾರ, ಸರ್ಕಾರವು 17,900 ಕೋಟಿ ರೂಪಾಯಿ ಪರಿಹಾರಕ್ಕಾಗಿ ಕೇಂದ್ರಕ್ಕೆ ಮನವಿ ಮಾಡಿದೆ. ಇನ್ನೂ ರಾಜ್ಯಕ್ಕೆ 16,000 ಕೋಟಿ ರೂಪಾಯಿ ನಷ್ಟ ಉಂಟಾಗಿದೆ. ರೈತರಿಗೆ ಮಾರ್ಗದರ್ಶನ ನೀಡುವುದು ಕೃಷಿ ವಿಶ್ವವಿದ್ಯಾಲಯಗಳು ಮತ್ತು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮಾತನಾಡಿ, ಬರಗಾಲವನ್ನು ಪರಿಗಣಿಸಿ **MGNREGA** ಸೋಮವಾರಗಳನ್ನು 100 ರಿಂದ 150 ಕ್ಕೆ ಹೆಚ್ಚಿಸಲು ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಮಾಡಿದೆ ಎಂದು ಹೇಳಿದರು.

200 ತಾಲೂಕುಗಳು ಬರಗಾಲದಿಂದ ತತ್ತರಿಸಿದ್ದು, ಈ ನಿರ್ಧಾರ ಸಂತ್ರಸ್ತ ಪ್ರದೇಶಗಳ ಜನರಿಗೆ ಸಹಾಯವಾಗಲಿದೆ. "ಬರಗಾಲದಲ್ಲಿ MGNREGA ದಿನಗಳನ್ನು ಹೆಚ್ಚಿಸಬೇಕು ಎಂಬ ನಿಯಮವಿದೆ.

ಆದರೆ ಈವರೆಗೆ ಏನನ್ನೂ ಮಾಡಿಲ್ಲ. ಬಿಜೆಪಿಯಲ್ಲಿ ರೈತರು ಮತ್ತು ಮಣ್ಣಿನ ಮಕ್ಕಳು ಎಂದು ಹೇಳಿಕೊಳ್ಳುವವರು ಮನ್ರೇಗಾ ದಿನಗಳ ಸಂಖ್ಯೆಯನ್ನು ಹೆಚ್ಚಿಸಲು ಕೇಂದ್ರವನ್ನು ಒತ್ತಾಯಿಸಬೇಕು ಎಂದು ತಿಳಿಸಿದರು.

ಬೆಂಗಳೂರು ಗ್ರಾಮಾಂತರ, ಕನಕಪುರ, ಚಿಕ್ಕಬಳ್ಳಾಪುರ ಮತ್ತು ಕೋಲಾರದ ರೈತರು ತರಕಾರಿ, ಹಣ್ಣು ಮತ್ತು ಹೂವುಗಳನ್ನು ಬೆಳೆಯುವ ಮೂಲಕ ದೇಶಕ್ಕೆ ಮಾದರಿಯಾಗಿದ್ದಾರೆ.

ಅವರು ತಮಗೆ ಲಭ್ಯವಿರುವ ವಿರಳ ಸಂಪನ್ಮೂಲಗಳನ್ನು ಬಳಸಿಕೊಳ್ಳುತ್ತಿದ್ದಾರೆ ಮತ್ತು ಉತ್ತಮ ಆದಾಯವನ್ನು ಗಳಿಸುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ, ಡಿಕೆ.ಶಿವಕುಮಾರ್ ಮತ್ತು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಐವರು 'ಅತ್ಯುತ್ತಮ ರೈತ ಸಾಧನೆಗಾಗಿ ಓರ್ವ ಕೃಷಿ ವಿಜ್ಞಾನಿಯನ್ನು ಸನ್ಮಾನಿಸಿದರು.

ಈ ನಡುವೆ ಕೃಷಿ ಮೇಳದ ಮೊದಲ ದಿನ 1,31,000 ಕ್ಕೂ ಹೆಚ್ಚು ಮಂದಿ ಭಾಗವಿಸಿದ್ದರು. ಮೇಳದಲ್ಲಿ ಒಟ್ಟು 625 ಸ್ಟಾಲ್‌ಗಳಿದ್ದು, ಮೊದಲನೇ ದಿನ 80 ಲಕ್ಷ ರೂಪಾಯಿ ವಹಿವಾಟು ನಡೆದಿದೆ ಎಂದು ವರದಿಗಳು ತಿಳಿಸಿವೆ.

ಬೆಂಗಳೂರು: ಖ್ಯಾತ ಜ್ಯೋತಿಷಿಗಳಿಗೆ 'ಜ್ಯೋತಿಷ್ಯ ರತ್ನ ಪುರಸ್ಕಾರ' ಪ್ರಶಸ್ತಿ ಪ್ರದಾನ

ಬೆಂಗಳೂರು: ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್‌ನಲ್ಲಿ ನಡೆದ ಕರ್ನಾಟಕ ಜ್ಯೋತಿಷ್ಯ ರತ್ನ ಪುರಸ್ಕಾರ ಕಾರ್ಯಕ್ರಮದಲ್ಲಿ ಪ್ರಸನ್ನ ಚಾರ್ಯ ಎಸ್ ಶೆಟ್ಟಿ ಮತ್ತು ಗೋವಿಂದ ವೇದ ಪ್ರಕಾಶ್ ಕರುಣಾಕರ ರೆಡ್ಡಿ ಸೇರಿದಂತೆ ಒಟ್ಟು 20 ಖ್ಯಾತ ಜ್ಯೋತಿಷಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಮಾರಂಭದಲ್ಲಿ ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ನ್ಯಾಯಮೂರ್ತಿ ನಿಟ್ಟೆ ಸಂತೋಷ್ ಹೆಗ್ಡೆ ಮತ್ತು ನಟ–ರಾಜಕಾರಣಿ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ವಿವಿಧ ಕ್ಷೇತ್ರಗಳ ಅತಿಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಖ್ಯಾತ ಜ್ಯೋತಿಷಿ ಎಸ್.ಕೆ.ಜೈನ್ ಮಾತನಾಡಿ, ಆಧುನಿಕ ಕಾಲದಲ್ಲಿ ಆಧ್ಯಾತ್ಮಿಕತೆ ಮತ್ತು ಜ್ಯೋತಿಷ್ಯದ ಮಹತ್ವವನ್ನು ಒತ್ತಿ ಹೇಳಿದರು.

ಇತ್ತೀಚಿನ ದಿನಗಳಲ್ಲಿ ಜನರು ಅತ್ಯಂತ ಒತ್ತಡದ ಜೀವನ ನಡೆಸುತ್ತಿದ್ದಾರೆ, ಇದರಿಂದ ಅವರಲ್ಲಿ ಖಿನ್ನತೆ, ಆತಂಕ ಇತ್ಯಾದಿಗಳು ಉಂಟಾಗುತ್ತವೆ.

ಆಧ್ಯಾತ್ಮಿಕತೆ ಮತ್ತು ಜ್ಯೋತಿಷ್ಯವು ನಿಮ್ಮ ಜೀವನವನ್ನು ಸರಿಪಡಿಸಲು ಸಹಾಯ ಮಾಡುವ ಮಾರ್ಗಗಳಲ್ಲಿ ಒಂದಾಗಿದೆ. ನನ್ನ ಜೀವನದಲ್ಲಿ ಅದರ ಪರಿಣಾಮವನ್ನು ನಾನು ನೋಡಿದ್ದೇನೆ ಎಂದು ಜೈನ್ ಹೇಳಿದರು.

ಕರ್ನಾಟಕದ ಜ್ಯೋತಿಷಿಗಳಿಗೆ ಅವರ ವಿವಿಧ ವಿಶೇಷತೆಗಳಿಗಾಗಿ ಪ್ರತ್ಯೇಕವಾಗಿ ಕಾರ್ಯಕ್ರಮ ವಿನ್ಯಾಸಗೊಳಿಸಲಾಗಿದೆ ಎಂದು ಕಾರ್ಯಕ್ರಮದ ಆಯೋಜಕ ಪ್ರಶಾಂತ್ ರಾವ್ ಪವಾರ್ ತಿಳಿಸಿದರು. ವಾಸ್ತು ಶಾಸ್ತ್ರ, ವಾಸ್ತು ವಿನ್ಯಾಸ ಮತ್ತು ಪ್ರಾದೇಶಿಕ ವ್ಯವಸ್ಥೆಗೆ ಪುರಾತನ ಮಾರ್ಗದರ್ಶಿ, ಸಂಖ್ಯಾಶಾಸ್ತ್ರ, ಸಂಖ್ಯೆಗಳ ಅಧ್ಯಯನ ಮತ್ತು ಜನರ ಜೀವನದ ಮೇಲೆ ಅವುಗಳ ಶಕ್ತಿಯುತ ಪ್ರಭಾವ ಮತ್ತು ನಾಡಿ ಶಾಸ್ತ್ರ, ಜ್ಯೋತಿಷ್ಯದ ಪುರಾತನ ರೂಪವಾಗಿದ್ದು, ವ್ಯಕ್ತಿಗಳ ಮೇಲೆ ಗ್ರಹಗಳ ಪ್ರಭಾವದ ಬಗ್ಗೆ ವಿವರಣೆ ಮತ್ತು ಸಲಹೆಯನ್ನು ನೀಡುತ್ತದೆ ಎಂದರು.

ರಾಜ್ಯ ಮಟ್ಟದ ಕರಾಟೆ ಪಂದ್ಯಾವಳಿ

ಶಿವಮೊಗ್ಗ: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಉಪನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ನ.21 ಮತ್ತು 22 ರಂದು ರಾಜ್ಯ ಮಟ್ಟದ 14 ಮತ್ತು 17 ವರ್ಷ ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ಕರಾಟೆ ಪಂದ್ಯಾವಳಿಯನ್ನು ನಗರದ ನೆಹರೂ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ನೆರವೇರಿಸುವರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಚಿವರಾದ ಬಿ.ನಾಗೇಶ್ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಮತ್ತು ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಡಿ. ಸುಧಾಕರ್ ಇವರ ಘನ ಉಪಸ್ಥಿತಿ ಇರಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಮೊಗ್ಗ ನಗರ ಶಾಸಕರಾದ ಎಸ್.ಎನ್ ಚನ್ನಬಸಪ್ಪ ವಹಿಸುವರು. ವಿಧಾನ ಸಭಾ, ವಿಧಾನ ಪರಿಷತ್ ಶಾಸಕರು, ಸಂಸದರು, ಮಹಾಪೌರರು, ಉಪ ಮಹಾಪೌರರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಆಡಳಿತಾಧಿಕಾರಿಗಳಾದ ಎಸ್.ಆರ್ ಉಮಾಶಂಕರ್, ಬೆಂಗಳೂರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಿತೇಶ್ಕುಮಾರ್ ಸಿಂಗ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆಯುಕ್ತರಾದ ಬಿ.ಬಿ ಕಾವೇರಿ, ಪ್ರೌಢ ಶಿಕ್ಷಣ ನಿರ್ದೇಶಕರಾದ ಕೃಷ್ಣಾಜಿ ಎಸ್. ಕರಿಚನ್ನಣ್ಣನವರ್, ಪ್ರಾಥಮಿಕ ಶಿಕ್ಷಣ ನಿರ್ದೇಶಕರಾದ ಪ್ರಸನ್ನಕುಮಾರ್ ಎಂ.ಎಸ್, ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯದ ಜಂಟಿ ನಿರ್ದೇಶಕರಾದ ಬಿ.ಎಸ್ ರಘುವೀರ್, ದೈಹಿಕ ಶಿಕ್ಷಣದ ಜಂಟಿ ನಿರ್ದೇಶಕ ಎಸ್.ಎನ್ ರಮೇಶ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರು ಸಿ.ಎಸ್ ಷಡಾಕ್ಷರಿ, ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ರಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಭಾಗವಹಿಸುವರು.

ವಿಮಾ ಪರಿಹಾರ ಮೊತ್ತ ಪಾವತಿಸಲು ಆದೇಶ

ಶಿವಮೊಗ್ಗ: ದೂರದಾರರಾದ ಸೂರ್ಯಕಲಾ ರವರಿಗೆ ಅವರ ಪತಿಯ ವಿಮಾ ಪರಿಹಾರ ಮೊತ್ತವನ್ನು ಪಾವತಿಸುವಂತೆ ವಿಮಾ ಕಂಪೆನಿಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರ ಪೀಠವು ಆದೇಶಿಸಿರುತ್ತದೆ.

ದಿ: 23–10–2019 ರಂದು ಸೂರ್ಯಕಲಾರವರ ಪತಿ ದಿವಂಗತ ಭವಾನಿ ಶಂಕರ್ ವಿಮಾ ಕಂಪೆನಿಯಿಂದ ವಿಮಾ ಪಾಲಿಸಿ ಪಡೆದು ರೂ.1,00,000 ಗಳನ್ನು ಎರಡು ವರ್ಷದ ಕಂತುಗಳಾಗಿ ಪಾವತಿಸಿರುತ್ತಾರೆ. ನಂತರ ಕೋವಿಡ್ ಖಾಯಿಲೆಯಿಂದ ದಿ: 03–06–2021 ರಂದು ಮರಣ ಹೊಂದಿರುತ್ತಾರೆ. ದೂರದಾರರಾದ ಸೂರ್ಯಕಲಾ ಎದುರುದಾರ ವಿಮಾ ಕಂಪೆನಿಯಿಂದ ಪತಿ ಮರಣಾನಂತರ ಬರಬೇಕಾದ ರೂ.5 ಲಕ್ಷ ಗಳ ಪಾಲಿಸಿ ಮೊತ್ತ ಪಾವತಿಸುವಂತೆ ಕೋರಿರುತ್ತಾರೆ.

ಆದರೆ ವಿಮಾ ಕಂಪೆನಿಯವರು ವಿಮಾದಾರರು ಪಾಲಿಸಿ ಪಡೆಯುವ ಸಂದರ್ಭದಲ್ಲಿ ಕ್ಯಾನ್ಸರ್ ಖಾಯಿಲೆ ಹೊಂದಿದ್ದು ಆ ವಿಷಯ ಮರೆಮಾಚಿದ್ದರು. ಇದು ವಿಮಾ ಪಾಲಿಸಿಯ ನಿಯಮಗಳ ಉಲ್ಲಂಘನೆಗೆ ಒಳಪಡುತ್ತದೆಂದು ವಿಮಾ ಪರಿಹಾರ ಅರ್ಜಿಯನ್ನು ನಿರಾಕರಿಸಿರುತ್ತಾರೆ.

ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ವಾಸ್ತವಾಂಶಗಳು, ಎದುರುದಾರರ ಪ್ರತ್ಯುತ್ತರ ಮತ್ತು ಎರಡು ಪಕ್ಷದವರು ಹಾಜರುಪಡಿಸಿದ ದಾಖಲೆಗಳನ್ನು ಕೂಲಂಕಶವಾಗಿ ಪರಿಶೀಲಿಸಿ, ವಿಮಾದಾರರು ಕೋವಿಡ್–19 ನ್ಯೂಮೊನಿಯಾ ಕಾರಣದಿಂದ ಮೃತಪಟ್ಟಿರುವುದು ದೃಢಪಟ್ಟ ಹಿನ್ನೆಲೆ ಎದುರುದಾರ ವಿಮಾ ಕಂಪೆನಿಯ ನಿರಾಕರಣೆ ಸಮಂಜಸವಲ್ಲವೆಂದು ಪರಿಗಣಿಸಿ ಪ್ರಕರಣವನ್ನು ಭಾಗಶಃ ಪುರಸ್ಕರಿಸಿರುತ್ತದೆ.

ಅದರಂತೆ ಎದುರುದಾರರು ಈಗಾಗಲೇ ರೂ.1 ಲಕ್ಷಗಳನ್ನು ದೂರುದಾರರ ಬ್ಯಾಂಕ್ ಖಾತೆಗೆ ಜಮಾ ಮಾಡಿದ್ದು ಬಾಕಿ ಉಳಿದ ವಿಮಾ ಪರಿಹಾರ ಮೊತ್ತ ರೂ.4 ಲಕ್ಷಗಳನ್ನು ಶೇ.6 ವಾರ್ಷಿಕ ಬಡ್ಡಿ ಸಮೇತ ಮತ್ತು ರೂ.5 ಸಾವಿರ ಗಳನ್ನು ವ್ಯಾಜ್ಯದ ಖರ್ಚುವೆಚ್ಚದ ಮೊತ್ತವನ್ನು ದೂರುದಾರರಿಗೆ ಪಾವತಿಸತಕ್ಕದ್ದು ಎಂದು ಆದೇಶಿಸಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಟಿ.ಶಿವಣ್ಣ, ಮಹಿಳಾ ಸದಸ್ಯರಾದ ಸವಿತಾ ಬಿ ಪಟ್ಟಣಶೆಟ್ಟಿ, ಬಿ.ಡಿ.ಯೋಗಾನಂದ ಭಾಂಡ್ಯ ಇವರ ಪೀಠವು ದಿ: 29–08–2023 ರಂದು ಆದೇಶಿಸಿದೆ.

ಸಾಗರ; ಮೆಸ್ಕಾಂ ಜನ ಸಂಪರ್ಕ ಸಭೆ

ಶಿವಮೊಗ್ಗ: ಮೆಸ್ಕಾಂ ಸಾಗರ ನಗರ ಉಪವಿಭಾಗ ಕಛೇರಿಯಲ್ಲಿ ನ. 21 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಜನ ಸಂಪರ್ಕ ಸಭೆ ನಡೆಯಲಿದ್ದು, ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ:9448289516.

ದಲಿತರ ಮೇಲೆ ದೌರ್ಜನ್ಯ ಪ್ರಕರಣ: 10 ಆರೋಪಿಗಳಿಗೆ ಒಂದು ವರ್ಷ ಜೈಲು ಶಿಕ್ಷೆ

ಬೆಂಗಳೂರು: ತುಮಕೂರು ಜಿಲ್ಲೆಯ ದುಂಡ ಗ್ರಾಮದಲ್ಲಿ ದಶಕದ ಹಿಂದೆ ನಡೆದಿದ್ದ ದಲಿತ ದೌರ್ಜನ್ಯ ಪ್ರಕರಣದ ಆರೋಪಿಗಳನ್ನು ಅಪರಾಧಿಗಳೆಂದು ಘೋಷಿಸಿದ್ದ ಹೈಕೋರ್ಟ್, ಶುಕ್ರವಾರ ಶಿಕ್ಷೆಯ ಪ್ರಮಾಣವನ್ನು ಪ್ರಕಟಿಸಿದೆ.

ಪರಿಶಿಷ್ಟ ಜಾತಿ ಮತ್ತು ಪಂಗಡ (ದೌರ್ಜನ್ಯ ತಡೆ) ಕಾಯಿದೆ ಅಡಿಯಲ್ಲಿ ಎಲ್ಲಾ 10 ಆರೋಪಿಗಳಿಗೆ ಒಂದು ವರ್ಷ ಜೈಲು ಶಿಕ್ಷೆ ಮತ್ತು 3 ಸಾವಿರ ರೂ.ಗಳ ದಂಡ ವಿಧಿಸಿದೆ. ಜತೆಗೆ, ಐಪಿಸಿಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಮಾಡಲಾದ ಆರೋಪಗಳಿಗೆ ವಿವಿಧ ಹಂತದ (ತಿಂಗಳುಗಳಲ್ಲಿ) ಶಿಕ್ಷೆ ವಿಧಿಸಿ ಒಟ್ಟು 85 ಸಾವಿರ ರೂ.ಗಳ ದಂಡ ವಿಧಿಸಿ ಆದೇಶಿಸಿದೆ.

ಆರೋಪಿಗಳನ್ನು ಖುಲಾಸೆಗೊಳಿಸಿದ್ದ ವಿಚಾರಣಾ ನ್ಯಾಯಾಲಯದ ಆದೇಶ ಪ್ರಶ್ನಿಸಿ ಪ್ರಕರಣದ ಸಂತ್ರಸ್ತೆಯಾಗಿರುವ ಲಕ್ಷ್ಮಮ್ಮ ಎಂಬುವರು ಸಲ್ಲಿಸಿದ್ದ

ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿ ನ್ಯಾಯಮೂರ್ತಿ ಕೆ.ಎಂ. ಖಾಜೀ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ವಿಚಾರಣಾ ನ್ಯಾಯಾಲಯ ಪ್ರಕರಣದಲ್ಲಿ ಪ್ರಾಸಿಕ್ಯೂಷನ್ ಸಾಕ್ಷ್ಯಾಧಾರಗಳು ಅನುಮಾನಾಸ್ಪಾದ ಆಗಿವೆ ಎಂದು ಹೇಳಿ ಆರೋಪಿಗಳನ್ನು ಖುಲಾಸೆಗೊಳಿಸಿದೆ. ಆದರೆ, ಪ್ರತ್ಯಕ್ಷದರ್ಶಿಗಳ ಸಾಕ್ಷ್ಯಗಳನ್ನು ಪರಿಶೀಲನೆ ನಡೆಸಿಲ್ಲ. ಆ ಮೂಲಕ ಆರೋಪಿಗಳನ್ನು ಖುಲಾಸೆಗೊಳಿಸಿ ಆದೇಶಿಸಿದೆ ಎಂದು ಪೀಠ ಅಭಿಪ್ರಾಯ ಪಟ್ಟಿದೆ. ಆದರೆ, ಪ್ರಕರಣದ 8ನೇ ಆರೋಪಿ ಶಿವಲಿಂಗಯ್ಯ ಎಂಬುವರು ಅರ್ಜಿ ವಿಚಾರಣೆ ನಡುವೆ ಮೃತಪಟ್ಟಿರುವುದರಿಂದ ಅವರ ವಿರುದ್ಧದ ಪ್ರಕರಣ ಹಿಂಪಡೆಯಲಾಗಿದೆ.

ಸಿವಿಲ್ ಪ್ರಕರಣವೊಂದಕ್ಕೆ ಪ್ರಕರಣದ ಆರೋಪಿಗಳಲ್ಲಿ ಒಬ್ಬರಾಗಿರುವ ಸುದೀಪ್ ಎಂಬುವರ ವಿರುದ್ಧ ಮೇಲ್ಮನವಿ ದಾರೆ ಲಕ್ಷ್ಮಮ್ಮ ದೂರು ನೀಡುವುದಕ್ಕೆ ಪೊಲೀಸ್ ಠಾಣೆಗೆ ಹೋಗಿದ್ದರು. ಇದರಿಂದ ಸಿಟ್ಟಾಗಿದ್ದ ಗ್ರಾಮದ ಸವರ್ಣೀಯರು 2008ರ ಆಗಸ್ಟ್ 14ರಂದು ದುಂದ ಗ್ರಾಮ ಹರಿಜನ ಕಾಲೋನಿಗೆ ನುಗ್ಗಿ ತಮ್ಮ ಜಾತಿಯನ್ನು ಪ್ರಸ್ತಾಪಿಸಿ ನಿಂದನೆ ಮಾಡಿದ್ದಾರೆ. ಜೊತೆಗೆ, ದೊಣ್ಣೆಗಳು ಹಾಗೂ ಕಲ್ಲುಗಳಿಂದ ಹಲ್ಲೆ ನಡೆಸಿ ರಕ್ತ ಸ್ರಾವವಾಗುವರೆಗೆ ಗಾಯಗೊಳಿಸಿದ್ದರು.

ಈ ಸಂಬಂಧ ದೂರು ದಾಖಲಾಗಿದ್ದು, ದೂರಿನ ಸಂಬಂಧ ದಂಡಿನಶಿವರ ಪೊಲೀಸರು ತನಿಖೆ ನಡೆಸಿ 11 ಮಂದಿ ವಿರುದ್ಧ ಆರೋಪ ಪಟ್ಟಿಯನ್ನು ಸಲ್ಲಿಸಿದ್ದರು. ಪ್ರಕರಣದ

ಸರ್ವೋಕಂಟ್ರೋಲ ಸಂಸ್ಥೆಗೆ ಇಸ್ರೋ ಗೌರವ

ಬೆಳಗಾವಿ: ಇತ್ತಿಚಿಗೆ ಇಸ್ರೋ ಸಂಸ್ಥೆಯ ವತಿಯಿಂದ ಬಾಹ್ಯಾಕಾಶಕ್ಕೆ ಪ್ರಯಾಣ ಬೆಳೆಸಿದ ಚಂದ್ರಯಾಣ–3 ಮತ್ತು ಆದಿತ್ಯ–ಎಲ್1 ಮಿಶನ್ ಲಾಂಚ ಸಂದರ್ಭದಲ್ಲಿ ತನ್ನದೇ ವಿಶೇಷ ಕೊಡುಗೆ ನೀಡಿದ ಬೆಳಗಾವಿಯ ಸರ್ವೋಕಂಟ್ರೋಲ ಸಂಸ್ಥೆಯ ತತ್ವರ ಕಾರ್ಯಕ್ಷಮತೆಯನ್ನು ಪರಿಗಣಿಸಿ ಇಸ್ರೋ ಸಂಸ್ಥೆಯು ಇತ್ತಿಚಿಗೆ ಸರ್ವೋಕಂಟ್ರೋಲ ಸಂಸ್ಥೆಗೆ ಮೆಚ್ಚುಗೆ ವ್ಯಕ್ತ ಪಡಿಸಿ ಗೌರವಿಸಿದೆ.

ಇಡಿ ವಿಶ್ವವೆ ಬೆರಗಾಗುವ ರೀತಿಯಲ್ಲಿ ಭಾರತ ದೇಶ ಹೊಸದೊಂದು ಮೈಲುಗಲ್ಲು ಸ್ಥಾಪಿಸಿದೆ. ಚಂದ್ರಯಾಣ–3 ಮತ್ತು ಆದಿತ್ಯ–ಎಲ್1 ಈ ಅಂತರಾಳ ಯಾನಗಳಲ್ಲಿ ನಿರ್ಧಿಷ್ಟವಾದ ಬಿಡಿಭಾಗಗಳನ್ನು ಅಳವಡಿಸುವುದು, ಅವುಗಳ ಕಾರ್ಯತತ್ಪರತೆ ಅಚ್ಚುಕಟ್ಟಾಗಿ ನಿರ್ವಹಿಸಿದ ಹಿನ್ನಲೆಯಲ್ಲಿ ಈ ಎರಡು ಯೋಜನೆಗಳು ಯಶಸ್ವಿಯಾಗಿವೆ.

ಈ ಹಿನ್ನಲೆಯಲ್ಲಿ ಇಸ್ರೋ ಸಂಸ್ಥೆಯು ಸರ್ವೋಕಂಟ್ರೋಲ ಸಂಸ್ಥೆಯನ್ನು ಗೌರವಿಸಿದೆ.

ಸರ್ವೋಕಂಟ್ರೋಲ ಸಂಸ್ಥೆಯ ಮಾರುಕಟ್ಟೆಯ ವಿಭಾಗದ ಹಿರಿಯ ಪ್ರಬಂಧಕ ಶ್ರೀನಿವಾಸ ಎನ.ಪಿ. ಹಾಗೂ ಯೋಜನಾ ಮತ್ತು ಮಾರುಕಟ್ಟೆಯ ಉಪ ಹಿರಿಯ ಪ್ರಬಂಧಕ ವಿಜಯ ಪ್ರಭು ಅವರು ಗೌರವ ಸ್ವೀಕರಿಸಿದರು.

ಹುಕ್ಕೇರಿ ಪುರಸಭೆಯಲ್ಲಿ ನಕಲಿ ಬಿಲ್ ಸೃಷ್ಟಿಸಿ ಲಕ್ಷಾಂತರ ಲೂಟಿ

ಅಧಿವೇಶನ ವೇಳೆ ಸದಸ್ಯರಿಂದ ಧರಣಿ ನಡೆಸುವ ಎಚ್ಚರಿಕೆ

ಹುಕ್ಕೇರಿ: ಇಲ್ಲಿನ ಪುರಸಭೆಯಲ್ಲಿ ವಿವಿಧ ಯೋಜನೆಗಳಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಲಕ್ಷಾಂತರ ರೂ,ಗಳನ್ನು ಲೂಟಿ ಮಾಡಲಾಗಿದೆ ಎಂದು ಪುರಸಭೆ ಮಾಜಿ ಉಪಾಧ್ಯಕ್ಷ ಆನಂದ ಗಂಧ, ಸದಸ್ಯ ಸದಾಶಿವ ಕರೆಪ್ಪಗೋಳ ಆರೋಪಿಸಿದರು.

ಪುರಸಭೆ ಕಚೇರಿಯಲ್ಲಿ ಶುಕ್ರವಾರ ಸಂಜೆ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಸದ್ಯ ಆಡಳಿತ ಮಂಡಳಿ ರಚನೆಯಾಗದೇ ಇರುವುದರಿಂದ ಅಧಿಕಾರಿ ಮತ್ತು ಸಿಬ್ಬಂದಿಗಳು ಮೀತಿ ಮೀರಿದ ಭ್ರಷ್ಟಾಚಾರದಲ್ಲಿ ತೊಡಗಿದ್ದು ಅನೇಕ ಯೋಜನೆಗಳಲ್ಲಿ ಖೊಟ್ಟಿ ದಾಖಲೆ ಸೃಷ್ಟಿಸಿ ಲಕ್ಷಾಂತರ ರೂ,ಗಳನ್ನು ಕೊಳ್ಳೆ ಹೊಡೆದಿದ್ದಾರೆ ಎಂದು ದೂರಿದರು.

ಬಹುತೇಕ ಸಿಬ್ಬಂದಿಗಳು ಜನರ ಕೈಗೆ ಸಿಗುವುದು ಅಪರೂಪವಾಗಿದ್ದು ಸಮಯ ಪರಿಪಾಲನೆ ಮಾಡುತ್ತಿಲ್ಲ. ಇದರಿಂದ ಅನೇಕ ಕಡತಗಳು ವಿಲೇವಾರಿಯಾಗದೇ ಹಾಗೆಯೇ ಉಳಿದುಕೊಂಡಿವೆ. ಕಳೆದ ಒಂದೂವರೆ ವರ್ಷದಿಂದ 15ನೇ ಹಣಕಾಸು ಯೋಜನೆ ಮತ್ತು ಎಸ್‌ಎಫ್‌ಸಿ ಅನುದಾನದ ಕಾಮಗಾರಿಗಳನ್ನು ಟೆಂಡರ್ ಕರೆದಿಲ್ಲ ಎಂದು ಅವರು ಆರೋಪಿಸಿದರು.

ಕಾರ್ಯಾಲಯದ ಮಳೆ ನೀರು ಕೊಯ್ಲು ಕಾಮಗಾರಿಯನ್ನು ಅರೆಬರೆ (ಅಪೂರ್ಣ) ಮಾಡಿ ಬಿಲ್ ಎತ್ತುವಳಿ ಮಾಡಲಾಗಿದೆ. ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ಬೆಲೆಗೆ ಕುರ್ಚಿಗಳು ಸೇರಿದಂತೆ ಪಿಠೋಪಕರಣಗಳನ್ನು ಖರೀದಿಸಿ ಅವ್ಯವಹಾರ ಎಸಗಲಾಗಿದೆ.

ಕೆಲ ಸಿಬ್ಬಂದಿಗಳು ಪುರಸಭೆಯ ಮಹತ್ವದ ದಾಖಲೆಗಳನ್ನು ಅನ್ಯರಿಗೆ ರವಾನಿಸುತ್ತಿದ್ದಾರೆ (ಸೋರಿಕೆ) ಮಾಡುತ್ತಿದ್ದಾರೆ. ಪ್ರತಿ ಕೆಲಸದಲ್ಲೂ ಭ್ರಷ್ಟಾಚಾರ ನಡೆದಿದ್ದು ಏಜೆಂಟರ ಹಾವಳಿ ಮೀತಿಮೀರಿದೆ ಎಂದು ಅವರು ದೂರಿದರು.

ಅಧಿಕಾರಿ ಮತ್ತು ಸಿಬ್ಬಂದಿಗಳು ದುರಾಡಳಿತ ನಡೆಸುವ ಮೂಲಕ ಜನರನ್ನು ಹಿಂಸಿಸುತ್ತಿದ್ದಾರೆ. ಮೂಲಭೂತ ಸೌಲಭ್ಯಗಳಿಗೆ ಜನರು ಪರಿತಪಿಸುತ್ತಿದ್ದಾರೆ.

ಪುರಸಭೆಯ ಅಕ್ರಮ, ಅವ್ಯವಹಾರ, ಅವ್ಯವಸ್ಥೆ ಕುರಿತು ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ರೀತಿಯ ಪ್ರಯೋಜನವಾಗಿಲ್ಲ.

ಹಾಗಾಗಿ ಬರುವ ತಿಂಗಳು ಬೆಳಗಾವಿಯಲ್ಲಿ ನಡೆಯಲಿರುವ ಅಧಿವೇಶನದಲ್ಲಿ ಸದಸ್ಯರ ನಿಯೋಗದೊಂದಿಗೆ ಸಂಬಂಧಿಸಿದ ಸಚಿವರನ್ನು ಭೇಟಿ ಮಾಡಲಾಗುವುದು. ಅಗತ್ಯವಿದ್ದಲ್ಲಿ ಸುವರ್ಣಸೌಧ ಎದುರು ಧರಣಿ ನಡೆಸಲಾಗುವುದು ಎಂದು ಅವರು ಎಚ್ಚರಿಸಿದರು.

ರವಿವಾರ ರಾಜ್ಯೋತ್ಸವ ಹಾಗೂ 'ಕನ್ನಡ ಗಡಿತಿಲಕ' ಪ್ರಶಸ್ತಿ ಪ್ರದಾನ

ಬೆಳಗಾವಿ: ಇಲ್ಲಿಯ ಬಿ.ಎ. ಸನದಿ ಸಾಂಸ್ಕೃತಿಕ ಪ್ರತಿಷ್ಠಾನವು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಇದೆ ರವಿವಾರ ದಿನಾಂಕ 19 ರಂದು ಮುಂಜಾನೆ 10:00 ಗಂಟೆಗೆ ರಾಜ್ಯೋತ್ಸವ ಹಾಗೂ 'ಕನ್ನಡ ಗಡಿತಿಲಕ' ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಿದೆ.

ಈ ವರ್ಷದ ಕನ್ನಡ ಗಡಿತಿಲಕ ಪ್ರಶಸ್ತಿಯನ್ನು ಕನ್ನಡ ಹೋರಾಟಗಾರ ಶ್ರೀ.ಅಶೋಕ ಚಂದರಗಿ ಅವರಿಗೆ ಪ್ರದಾನ ಮಾಡಲಾಗುವುದು ಬೆಳಗಾವಿಯ ನಾಗನೂರು ರುದ್ರಾಕ್ಷಿ ಮಠದ ಪರಮಪೂಜ್ಯ ಶ್ರೀ.ಅಲ್ಲಮಪ್ರಭು ಮಹಾ ಸ್ವಾಮೀಜಿಯವರು ಸಾನಿಧ್ಯ ವಹಿಸುವರು.

ಶಿಕ್ಷಣ ತಜ್ಞ ಪ್ರೊ. ಶಿವಶಂಕರ ಹಿರೇಮಠ ಪ್ರಶಸ್ತಿ ಪ್ರದಾನ ಮಾಡುವರು. ವೈದ್ಯ ಸಾಹಿತಿ ದಯಾನಂದ ನೂಲಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಡಾ.ಪಿ.ಜಿ.ಕೆಂಪಣ್ಣವರ ಅಭಿನಂದನಾ ನುಡಿಗಳನ್ನಾಡಲ್ಲಿದ್ದು, ರಾಮಕೃಷ್ಣ ಮರಾಠೆ ಅಧ್ಯಕ್ಷತೆ ವಹಿಸುವರು.

ಅಭಿಮಾನಿಗಳು ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಪ್ರತಿಷ್ಠಾನದ ಕಾರ್ಯದರ್ಶಿ ಬಸವರಾಜ ಗಾರ್ಗಿ ಅವರು ಪ್ರಕಟಣೆಯೊದರಲ್ಲಿ ಕೋರಿದ್ದಾರೆ.

ಡಾ. ಗಿರೀಶ್ ಸೋನವಾಲ್ಕರ್ ಫೌಂಡೇಶನ್ ಕಚೇರಿ ಉದ್ಘಾಟನೆ

ಬೆಳಗಾವಿ: ಇಲ್ಲಿನ ಕ್ಲಬ್ ರಸ್ತೆಯಲ್ಲಿರುವ ಕ್ರಿಶ್ ಕ್ಲಬ್ ರೆಸಿಡೆನ್ಸಿಯಲ್ಲಿ ಶನಿವಾರ ಖ್ಯಾತ ವೈದ್ಯ ಡಾ. ಗಿರೀಶ ಸೋನವಾಲ್ಕರ್ ಅವರ ಡಾ. ಗಿರೀಶ್ ಸೋನವಾಲ್ಕರ್ ಫೌಂಡೇಶನ್ ನ ಕಚೇರಿ ಉದ್ಘಾಟಿಸಿಲಾಯಿತು.

ವಡಂಬೈಲು ಹೆಚ್.ಎಂ. ವೀರರಾಜಯ್ಯ ಜೈನ್ ಸ್ವಾಮೀಜಿ , ಕಾರಂಜಿ ಮಠದ ಪೂಜ್ಯ ಗುರುಸಿದ್ಧ ಮಹಾಸ್ವಾಮೀಜಿ, ನಾಗನೂರ ರುದ್ರಾಕ್ಷಿ ಮಠದ ಅಲ್ಲಮಪ್ರಭು ಸ್ವಾಮೀಜಿ ಸೇರಿದಂತೆ ಅನೇಕ ಗಣ್ಯರು ಸಮಾರಂಭಕ್ಕೆ ಆಗಮಿಸಿದ ಶುಭ ಕೋರಿದರು.

ಸಮಾಜಮುಖಿ ಚಟುವಟಿಕೆಗಳ ಉದ್ದೇಶದಿಂದ ಅಸ್ತಿತ್ವಕ್ಕೆ ಬಂದಿರುವ ಈ ಫೌಂಡೇಶನ್ ಮುಂಬರುವ ದಿನಗಳಲ್ಲಿ ಜನಪರ ಕೆಲಸಗಳನ್ನು ಮಾಡಲಿದೆ ಎಂದು ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಡಾ. ಗಿರೀಶ ಸೋನವಾಲ್ಕರ್ ಅವರು ತಿಳಿಸಿದರು.

ಜನಸೇವೆಗಾಗಿ ಡಾ. ಗಿರೀಶ್ ಸೋನವಾಲ್ಕರ್ ಫೌಂಡೇಶನ್ ಆರಂಭಿಸಲಾಗಿದೆ. ನಿಮ್ಮ ಕಷ್ಟಗಳಿಗೆ ನಾವು ಧ್ವನಿಯಾಗುತ್ತೆವೆ. ನಮಗೆ ಸಿಕ್ಕ ಅವಕಾಶ ಸದ್ವಳಕೆ ಮಾಡಿಕೊಂಡು, ಫೌಂಡೇಶನ್ ನ್ನು ಬೆಳೆಸೋಣ ಇದಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯವಿದೆ ಎಂದು ಹೇಳಿದರು. ಬಳಿಕ, ಪೂಜ್ಯರು ಸೋನವಾಲ್ಕರ್ ಸಹೋದರರಿಗೆ ಸನ್ಮಾನಿಸಿ, ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಶಾಸಕ ರಾಜು ಶೇಠ, ಮೃಣಾಲ್ ಹೆಬ್ಬಾಳಕರ್, ಲೋಕಾಯುಕ್ತ ಎಸ್ಪಿ ಹಣಮಂತ್ರಾಯ, ಅಬಕಾರಿ ನಿರ್ದೇಶಕರಾದ ಮಂಜುನಾಥ್, ಡಾ.ಉಮಾ ಸಾಲಿಗೌಡರ, ಗೀತಾ ಕವಲಗಿ, ಉದ್ಯಮಿ ಸಂತೋಷ ಸೋನವಾಲ್ಕರ್ , ಪ್ರೊ. ಪ್ರಕಾಶ ಸೋನವಾಲ್ಕರ್, ಮಾಜಿ ಶಾಸಕ ಮಹಾದೇವ ಯಾದವಾಡ, ಮಲ್ಲನಗೌಡ ಯಾದವಾಡ, ಅನಿಲ ಬೆನಕೆ, ನಾಗೇಶ ದೇಸಾಯಿ, ಯುವರಾಜ ಕದಂ, ಬಿಜೆಪಿ ಮುಖಂಡ ಮುರುಗೇಂದ್ರ ಪಾಟೀಲ ಹಾಗೂ ಇತರರು ಇದ್ದರು.

ಪತ್ನಿಯನ್ನು ಆಕೆಯ ಪ್ರಿಯಕರನೊಂದಿಗೆ ಮದುವೆ ಮಾಡಿಸಿದ ಪತಿ

ಪ್ರಿಯಕರನ ಜೊತೆ ರಿಲೇಶನ್'ಶಿಪ್ನಲ್ಲಿದ್ದ ತನ್ನ ಪತ್ನಿಗೆ ಆತನನ್ನೇ ಮದುವೆಯಾಗಲು ಹೇಳಿ ಪತಿ ಬಿಟ್ಟುಕೊಟ್ಟಿರುವ ಅಪರೂಪದ ಘಟನೆ ಬಿಹಾರದ ಬೇಗುಸರೈನಲ್ಲಿ ನಡೆದಿದೆ ಎಂದು ವರದಿಯಾಗಿದೆ.

ಅಲ್ಲದೇ ತಾನೇ ಮುಂದೆ ನಿಂತು ಪತಿ ತನ್ನ ಪತ್ನಿಯನ್ನು ಆಕೆಯ ಪ್ರಿಯಕರನೊಂದಿಗೆ ವಿವಾಹ ಮಾಡಿಕೊಟ್ಟಿದ್ದಾನೆ.

ದಂಪತಿಗೆ ಇಬ್ಬರು ಮಕ್ಕಳಿದ್ದು, ಆ ಮಕ್ಕಳನ್ನು ತಾನೇ ನೋಡಿಕೊಳ್ಳುತ್ತೇನೆ. ಇದರಿಂದ ತನ್ನ ಹೊಸ ಜೀವನ ಸಂಗಾತಿಯೊಂದಿಗೆ ಹೆಂಡತಿಗೆ ಹೊರೆಯಾಗಬಾರದು ಎಂದು ಸಹ ಪತಿ ಹೇಳಿದ್ದಾನೆ.

ಈ ಬಗ್ಗೆ ಮಾತನಾಡಿದ ಪತಿ ಅಜಯ್, ಕಾಜಲ್ ಅವರ ಕುಟುಂಬ ಸದಸ್ಯರು ರೊಮ್ಯಾನ್ಸ್ ಮಾಡುತ್ತಿದ್ದಾಗ ಸಿಕ್ಕಿಬಿದ್ದಿದ್ದಾರೆ. ಈ ಘಟನೆಯ ಬಗ್ಗೆ ನನ್ನ ಕುಟುಂಬದವರು ಹೇಳಿದಾಗ ನಾನು ಮೊದಲು ಆಘಾತಕ್ಕೊಳಗಾಗಿದ್ದೆ. ಆದರೆ, ನಾನು ಅವಳನ್ನು ನನ್ನ ವೈವಾಹಿಕ ಬಂಧದಿಂದ ಮುಕ್ತಗೊಳಿಸಲು ನಿರ್ಧರಿಸಿದೆ ಎಂದು ತಿಳಿಸಿದ್ದಾರೆ.

ಅಜಯ್ ಕುಮಾರ್ 2018 ರಲ್ಲಿ ಕಾಜಲ್ ಅವರನ್ನು ಮದುವೆಯಾದರು. ಆದರೆ, ಮದುವೆಯ ಬಳಿಕ ಕಾಜಲ್ ಮನ್ಸೂರ್ಚಕ್ ಪೊಲೀಸ್ ಠಾಣೆ ವ್ಯಾಪ್ತಿಯ ಅಫಾಪುರ ಗ್ರಾಮದ ನಿವಾಸಿ ರಾಜ್ ಕುಮಾರ್ ಠಾಕೂರ್ ಅವರೊಂದಿಗೆ ಸಂಪರ್ಕದಲ್ಲಿದ್ದರು ಮದುವೆಗೂ ಮುನ್ನವೇ ಕಾಜಲ್ ಮತ್ತು ರಾಜ್ ಕುಮಾರ್ ಪ್ರೀತಿಸುತ್ತಿದ್ದರು ಎಂದು ವರದಿ ತಿಳಿಸಿದೆ.

ಬಡ ಮಕ್ಕಳ ಆರ್‌ಟಿಇ ಶಾಲಾ ಶುಲ್ಕ ಭರಿಸದ ಸರ್ಕಾರ: ಹೋರಾಟದ ಎಚ್ಚರಿಕೆ

ತುಮಕೂರು: ಸರಕಾರ ಆರ್‌ಟಿಇ ಅಡಿಯಲ್ಲಿ ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಶಾಲೆಗಳಿಗೆ ಬಾಕಿ ಇರುವ ಅನುದಾನವನ್ನು ಬಿಡುಗಡೆ ಮಾಡಬೇಕು, ಅನುದಾನವನ್ನು ಹೆಚ್ಚಿಸಬೇಕು, ಹಾಗೆಯೇ ಬಡ ಮಕ್ಕಳ ಹಿತದೃಷ್ಟಿಯಿಂದ ಆರ್ಟಿ.ಇ ಯೋಜನೆಯನ್ನು ಜಾರಿಗೆ ತರಬೇಕೆಂದು ರೂಪ್ಸಾ ರಾಜ್ಯಾಧ್ಯಕ್ಷ ಡಾ.ಹಾಲೆನೂರು ಲೇಪಾಕ್ಷ ಒತ್ತಾಯಿಸಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್ಟಿ.ಇ ಅಡಿಯಲ್ಲಿ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಕಲಿಯುತ್ತಿರುವ ಬಡ ವರ್ಗದ ವಿದ್ಯಾರ್ಥಿಗಳಿಗೆ 2022–23ನೇ ಸಾಲಿನ ಶೇ.30ರಷ್ಟು ಅನುದಾನ ಇದುವರೆಗೂ ಬಂದಿಲ್ಲ. ಜೊತೆಗೆ 2023–24ನೇ ಸಾಲಿನ ಶೈಕ್ಷಣಿಕ ವರ್ಷದ ಕೊನೆಯ ಹಂತದಲ್ಲಿದ್ದರೂ ಸಹ ಸರಕಾರ ಅನುದಾನ ಬಿಡುಗಡೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಮುಂದಿನ 15 ದಿನಗಳಲ್ಲಿ ಬಾಕಿ ಹಣ ನೀಡದಿದ್ದರೆ ಹೋರಾಟ ಅನಿವಾರ್ಯ ಎಂದು ಎಚ್ಚರಿಸಿದರು.

ರಾಜ್ಯದಲ್ಲಿ ಸುಮಾರು 26,500 ಖಾಸಗಿ ಅನುದಾನರಹಿತ ಶಾಲೆಗಳಿವೆ. ಇವುಗಳಲ್ಲಿ ಸುಮಾರು 11 ಲಕ್ಷ ಕ್ಕೂ ಅಧಿಕ ಮಕ್ಕಳು ಕಲಿಯುತ್ತಿದ್ದಾರೆ. ಈ ಹಿಂದಿನ ಸರಕಾರ ಕಳೆದ ನಾಲ್ಕು ವರ್ಷಗಳಿಂದ ಆರ್ಟಿ.ಇ ರದ್ದು ಪಡಿಸಿದೆ. ಪ್ರಸ್ತುತ 7,8,9 ಮತ್ತು 10ನೇ ತರಗತಿ ವಿದ್ಯಾರ್ಥಿಗಳು ಮಾತ್ರ ಕಲಿಯುತ್ತಿದ್ದು, ಇವರಿಗೆ ಸರಕಾರ ಕಳೆದ 8 ವರ್ಷಗಳ ಹಿಂದೆ ಒಬ್ಬ ವಿದ್ಯಾರ್ಥಿಗೆ 16 ಸಾವಿರ ರೂ ನಿಗದಿ ಪಡಿಸಿದೆ. ಆದರೆ ಸರಕಾರ ತಾನೇ ನಿರ್ವಹಿಸುತ್ತಿರುವ ಶಾಲೆಗಳಲ್ಲಿ ಒಂದು ಮಗುವಿಗೆ 82 ಸಾವಿರ ರೂ. ಖರ್ಚು ಮಾಡುತ್ತಿದೆ. ಹಾಗಾಗಿ ಆರ್ಟಿ.ಇ ನಲ್ಲಿ ಕಲಿಯುತ್ತಿರುವ ಮಕ್ಕಳಿಗೆ ವಾರ್ಷಿಕ ಕನಿಷ್ಠ 30 ಸಾವಿರ ರೂ.ಗಳನ್ನಾದರೂ ನೀಡಬೇಕೆಂದು ಹಾಲೆನೂರು ಲೇಪಾಕ್ಷ ಒತ್ತಾಯಿಸಿದರು.

ಖಾಸಗಿ ಅನುದಾನ ರಹಿತ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಉಚ್ಚ ನ್ಯಾಯಾಲಯ ಸ್ಪಷ್ಟ ಆದೇಶ ನೀಡಿದ್ದು, 2021ಕ್ಕಿಂತ ಮೊದಲು ಶಾಲಾ ಕಟ್ಟಡ ನಿರ್ಮಿಸಿದವರಿಗೆ ಅಗ್ನಿ ದುರಂತ ಮುಂಜಾಗ್ರತಾ ಪ್ರಮಾಣ ಪತ್ರದಲ್ಲಿ ವಿನಾಯಿತ ನೀಡುವಂತೆ ಮತ್ತು ನವೀಕರಣವನ್ನು 10 ವರ್ಷಗಳಿಗೆ ಒಮ್ಮೆ ತೆಗೆದುಕೊಳ್ಳುವಂತೆ ಆದೇಶ ಮಾಡಿದ್ದರೂ ಇದುವರೆಗೂ ಸರಕಾರ ಈ ನಿಟ್ಟಿನಲ್ಲಿ ಯಾವುದೇ ಕ್ರಮ ಕೈಗೊಂಡಿಲ್ಲ. ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಆಯುಕ್ತರಿಗೂ ಈ ಬಗ್ಗೆ ಮನವರಿಕೆ ಮಾಡಿಕೊಟ್ಟರೂ ಇದುವರೆಗೂ ನವೀಕರಣ ಫಾರಂನಲ್ಲಿರುವ ಅಗ್ನಿ ಶಾಮಕ ಷರತ್ತು ವಾಪಸ್ ಪಡೆದಿಲ್ಲ. ಕೂಡಲೇ ಸರಕಾರ ಷರತ್ತು ವಾಪಸ್ ಪಡೆಯಬೇಕು. ಇಲ್ಲದಿದ್ದಲ್ಲಿ ಆಯುಕ್ತರ ಕಚೇರಿ ಮುಂದೆ ಧರಣಿ ನಡೆಸಲಾಗುವುದು ಎಂದು ಡಾ.ಹಾಲೆನೂರು ಲೇಪಾಕ್ಷ ತಿಳಿಸಿದರು.

ಬಡವರ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬ ಮಹದಾಸೆಯಿಂದ ಸರಕಾರ ಆರ್ಟಿ.ಇ ರೂಪಿಸಿದೆ. ಆದರೆ ಕಳೆದ ಸರಕಾರ ನಾಲ್ಕುವರ್ಷಗಳ ಹಿಂದೆ ರಾಜ್ಯದಲ್ಲಿ ಆರ್ಟಿ.ಇ ರದ್ದು ಮಾಡಿದ್ದ ಪರಿಣಾಮ, ಬಡವರ ಮಕ್ಕಳು ದೊಡ್ಡ ಮಟ್ಟದ ಶುಲ್ಕ ಭರಿಸಿ ಪ್ರತಿಷ್ಠಿತ ಶಾಲೆಗಳಲ್ಲಿ ಕಲಿಯಲು ಆಗದಂತಹ ಸ್ಥಿತಿ ನಿರ್ಮಾಣವಾಗಿದೆ. ಹಾಗಾಗಿ ಸರಕಾರ ರಾಜ್ಯದಲ್ಲಿ ಆರ್ಟಿ.ಇ ನೊಂದಣಿಯನ್ನು ಪುನಃ ಪ್ರಾರಂಭಿಸಬೇಕು ಎಂಬುದು ರೂಪ್ಸಾ ಕರ್ನಾಟಕದ ಒತ್ತಾಯವಾಗಿದೆ ಎಂದರು.

ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಶಾಲೆಗಳ ಸಂಘಕ್ಕೂ, ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳ ಸಂಘ ಇವೆರಡು ಬೇರೆ ಬೇರೆಯಾಗಿದ್ದು, ರೂಪ್ಸಾದಿಂದ ಉಚ್ಚಾಟನೆಗೊಂಡ ಲೋಕೇಶ್ ತಾಳಿಕೋಟೆ ಎಂಬ ವ್ಯಕ್ತಿ, ನಮ್ಮ ಸಂಘದ ಹೆಸರು ದುರುಪಯೋಗ ಪಡಿಸಿಕೊಂಡು ಮಾಧ್ಯಮದವರಿಗೆ ಹೇಳಿಕೆ ನೀಡುವ ಮೂಲಕ ಸಾರ್ವಜನಿಕರಲ್ಲಿ ಗೊಂದಲ ಮೂಡಿಸುತ್ತಿದ್ದಾರೆ. ಈಗಾಗಲೇ ಇವರ ವಿರುದ್ಧ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ವಿಚಾರಣೆ ಎದುರಿಸುತ್ತಿದ್ದಾರೆ. ಇಂದು ತುಮಕೂರು ಎಸ್ಪಿ ಕಚೇರಿಗೂ ಲೋಕೇಶ್ ತಾಳಿಕೋಟೆ ವಿರುದ್ಧ ದೂರು ಸಲ್ಲಿಸುವುದಾಗಿ ಡಾ.ಹಾಲೆನೂರು ಲೇಪಾಕ್ಷ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರೂಪ್ಸಾ ರಾಜ್ಯ ಉಪಾಧ್ಯಕ್ಷ ಪ್ರದೀಪ್ಕುಮಾರ್, ಜಿಲ್ಲಾ ನಿರ್ದೇಶಕ ನಯಾಜ್ ಅಹಮದ್, ರಾಜ್ಯ ನಿರ್ದೇಶಕರಾದ ಚಂದ್ರಶೇಖರ್, ಮುರುಳೀಕೃಷ್ಣ, ಉಮಾಶಂಕರ್ ಮತ್ತಿತರರು ಪಾಲ್ಗೊಂಡಿದ್ದರು.

ನೆಹರು, ಮಕ್ಕಳ ಪ್ರೀತಿಯ ಚಾಚಾ ಆಗಿದ್ದರು: ಶಿಕ್ಷಕ ಕಬ್ಬೂರ

ಸವದತ್ತಿ: "ಭಾರತದ ಪ್ರಥಮ ಪ್ರಧಾನಿಯವರಾದ ಪಂಡಿತ ಜವಾಹರಲಾಲ್ ನೆಹರು ಮತ್ತು ಮಕ್ಕಳಿಗೆ ಅವಿನಾಭಾವ ಸಂಬಂಧವಿತ್ತು, ಅವರು ದೇಶದ ಪ್ರಧಾನಿಯಾಗಿದ್ದರೂ ಸಹ ಬಿಡುವಿನ ವೇಳೆಯಲ್ಲಿ ಮಕ್ಕಳೊಂದಿಗೆ ಕಾಲ ಕಳೆಯುತ್ತಿದ್ದರು, ಅವರಿಗೆ ಮಕ್ಕಳ ಮೇಲೆ ವಿಶೇಷ ಪ್ರೀತಿ ಕಾಳಜಿ ಇತ್ತು, ಮಕ್ಕಳನ್ನು ಅವರು ತುಂಬಾ ಇಷ್ಟಪಡುತ್ತಿದ್ದರು.

ಮಕ್ಕಳೂ ಸಹ ಇವರನ್ನು ಪ್ರೀತಿಯಿಂದ ಚಾಚಾ ಎಂದು ಕರೆಯುತ್ತಿದ್ದರು, ಮಕ್ಕಳ ಮೇಲಿನ ಅವರ ಅಪಾರವಾದ ಪ್ರೀತಿಯ ಸವಿನೆನಪಿಗಾಗಿ ತಮ್ಮ ಹುಟ್ಟುಹಬ್ಬವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲು ಹೇಳಿದರು" ಎಂದು ಶಿಕ್ಷಕ ಎನ್.ಎನ್.ಕಬ್ಬೂರ ತಮ್ಮ ಅಭಿಪ್ರಾಯ ಹಂಚಿಕೊಂಡರು.

ಪಟ್ಟಣದ ಸ.ಕಿ.ಪ್ರಾ ಕನ್ನಡ ಶಾಲೆ ನಂ–6 ಸವದತ್ತಿಯಲ್ಲಿ ಮಕ್ಕಳ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಕ್ಕಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಕ್ಕಳ ಮನಸ್ಸು ಯಾವತ್ತಿಗೂ ನಿಷ್ಕಲ್ಮಶವಾದ ಪ್ರೀತಿಯನ್ನು ಹೊಂದಿರುತ್ತದೆ, ಅವರ ಪ್ರೀತಿಯಲ್ಲಿ ಯಾವುದೇ ಕಲ್ಮಶ ಇರುವುದಿಲ್